ಸಂಪುಟ: 11 ಸಂಚಿಕೆ: 199 ಪುಟಗಳು: 4+2 ಬೆಲೆ: ₹ 3.00 ಶನಿವಾರ, ಸೆಪ್ಟೆಂಬರ್ 12, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 199 Pages : 4+2 Rate : 3.00 Saturday, September 12, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www. Vijayasakshi.com ವೀಕ್ಷಿಸಿ.

### ನಾಡಿನ ಪ್ರಾಕೃತಿಕ ಸಂಪತ್ತು ಕಾಪಾಡುವ ಗುರುತರ ಹೊಣೆಗಾರಿಕೆ ಇದೆ


# ಅರಣ್ಯ ರಕ್ಷಕರು ದೇಶದ ಸೈನಿಕರಿದ್ದಂತೆ

**ವಿಜಯಸಾಕ್ಷಿ ಸುದ್ದಿ**

**ಗದಗ:** ದೇಶದ ಗಡಿಯನ್ನು ಸೈನಿಕರು ಕಾಯುವಂತೆ, ನಾಡಿನ ಅಮೂಲ್ಯ ಪ್ರಾಕೃತಿಕ ಸಂಪತ್ತನ್ನು ರಕ್ಷಿಸುವ ಗುರುತರ ಜವಾಬ್ದಾರಿಯನ್ನು ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ನಿರ್ವಹಿಸುತ್ತಿದ್ದಾರೆ ಎಂದು ಹಿರಿಯ ದಿವಾಣಿ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಹೇಳಿದರು.

ತಾಲೂಕಿನ ಬಿಂಕದಕಟ್ಟಿಯ ಸಾಲುಮರದ ತಿಮ್ಮಕ್ಕ ಸಸ್ಯೋದ್ಯಾನದಲ್ಲಿ ಶುಕ್ರವಾರ ಅರಣ್ಯ ಇಲಾಖೆ ಆಯೋಜಿಸಿದ್ದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

1980ರ ಅರಣ್ಯ ಸಂರಕ್ಷಣಾ ಕಾಯ್ದೆಗೆ ಸುಪ್ರೀಂ ಕೋರ್ಟ್‌ನ ಟಿ.ಎನ್. ಗೋದಾವರ್ಮನ್ ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದ ತೀರ್ಪಿನ ಬಳಿಕ ಮತ್ತಷ್ಟು ಬಲ ದೊರೆತಿದೆ. ಕರ್ನಾಟಕ ಅರಣ್ಯ ಕಾಯ್ದೆಯ ಸೆಕ್ಷನ್ 62ರಡಿ ಅರಣ್ಯ ಅಧಿಕಾರಿಗಳಿಗೆ ಪೊಲೀಸ್ ಅಧಿಕಾರಿಗಳಂತೆಯೇ



ಅಧಿಕಾರ ಹಾಗೂ ರಕ್ಷಣೆ ನೀಡಲಾಗಿದೆ. ಸರ್ಕಾರಿ ದಾಖಲೆಗಳಲ್ಲಿ 'ಅರಣ್ಯ' ಎಂದು ನಮೂದಾಗಿರುವ ಪ್ರದೇಶವನ್ನು ಕೇಂದ್ರ ಸರ್ಕಾರದ ಅನುಮತಿಯಿಲ್ಲದೆ ಅನ್ಯ ಉದ್ದೇಶಕ್ಕೆ ಬಳಸಲು ಸಾಧ್ಯವಿಲ್ಲ ಎಂದರು.

ಅರಣ್ಯ ರಕ್ಷಣೆ ಹಾಗೂ ಕಳ್ಳಸಾಗಣೆ ತಡೆಯುವ ಸಂದರ್ಭದಲ್ಲಿ ಪ್ರಾಣತ್ಯಾಗ ಮಾಡಿದ ಹುತಾತ್ಮರ ಕುಟುಂಬಗಳಿಗೆ ಸೂಕ್ತ ಪರಿಹಾರ, ಬೆಂಬಲ ಹಾಗೂ ಪುನರ್ವಸತಿ ಕಲ್ಪಿಸುವುದು ದಿನಾಚರಣೆಯ ಪ್ರಮುಖ ಉದ್ದೇಶವಾಗಿದೆ. ಅವರ ಕುಟುಂಬಗಳೊಂದಿಗೆ ನಾವಿದ್ದೇವೆ ಎಂಬ ಭರವಸೆ ನೀಡುವುದು ಅಗತ್ಯ ಎಂದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಮುಂದಿನ ಪೀಳಿಗೆಗಾಗಿ ಅರಣ್ಯ ಉಳಿಸುವ ಉದ್ದೇಶದಿಂದ ಸಿಬ್ಬಂದಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ್ದಾರೆ. ಕರ್ತವ್ಯವೇ ಮುಖ್ಯವೆಂದು ಭಾವಿಸಿ ಅಪಾಯಗಳನ್ನು ಎದುರಿಸಿದ ಅವರ ಬಲಿದಾನ ಸ್ಮರಣೀಯ. ಗಡಿಯಲ್ಲಿ ಕಾಯುವ ಯೋಧರಂತೆ ಅರಣ್ಯ ಸಿಬ್ಬಂದಿ ಕಾಡು ಮತ್ತು ಮಾನವ ವಸತಿ ಪ್ರದೇಶಗಳ ನಡುವಿನ ಸೂಕ್ಷ್ಮ ಗಡಿಯನ್ನು ಹಗಲಿರುಳು ಕಾಯುತ್ತಿದ್ದಾರೆ ಎಂದರು. ಅರಣ್ಯ ಕ್ಷೇತ್ರದಲ್ಲಿ ಎದುರಾಗುವ ಅಪಾಯಗಳ ನಡುವೆಯೂ ಸಿಬ್ಬಂದಿಗೆ ನೀಡುವ ತರಬೇತಿ ಅವರಲ್ಲಿ ಕರ್ತವ್ಯನಿಷ್ಠೆ ಹಾಗೂ ಆತ್ಮಧೈರ್ಯ ತುಂಬುತ್ತದೆ. ಇಂತಹ ಧೀರ ಸಿಬ್ಬಂದಿಯನ್ನು ಕಳೆದುಕೊಳ್ಳುವುದು ದೇಶ ಹಾಗೂ ಇಲಾಖೆಗೆ ತುಂಬಲಾರದ

> ವನ್ಯಜೀವಿಗಳ ದಾಳಿ ಹಾಗೂ ಅರಣ್ಯ ರಕ್ಷಣೆಯ ಸವಾಲುಗಳ ನಡುವೆಯೂ ಕರ್ತವ್ಯ ನಿರ್ವಹಿಸಿ ಪ್ರಾಣತ್ಯಾಗ ಮಾಡಿದ ವೀರ ಸಿಬ್ಬಂದಿಯ ಬಲಿದಾನ ನಮಗೆ ಸದಾ ಪ್ರೇರಣೆಯಾಗಬೇಕು. ಹುತಾತ್ಮರ ಕುಟುಂಬಗಳೊಂದಿಗೆ ಅರಣ್ಯ ಇಲಾಖೆ ಸದಾ ನಿಲ್ಲಲಿದೆ.
>
> **– ಸಂತೋಷಕುಮಾರ ಕೆಂಚಪ್ಪನವರ,**
> **ಉಪ ಅರಣ್ಯ ಸಂರಕ್ಷಣಾಧಿಕಾರಿ, ಗದಗ**

ನಷ್ಟ. ಅರಣ್ಯ ಮತ್ತು ಪ್ರಕೃತಿಯನ್ನು ಮುಂದಿನ ಪೀಳಿಗೆಗೆ ಉಳಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಅವರು ಹೇಳಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ ಕೆಂಚಪ್ಪನವರ ಮಾತನಾಡಿ, ಅರಣ್ಯ ಸಂರಕ್ಷಣೆ ಕೇವಲ ಅರಣ್ಯ ಇಲಾಖೆಯ ಜವಾಬ್ದಾರಿಯಲ್ಲ. ಸಾರ್ವಜನಿಕರು ಹಾಗೂ ಇತರ ಇಲಾಖೆಗಳು ಒಗ್ಗೂಡಿ ಶ್ರಮಿಸಿದಾಗ ಮಾತ್ರ ಪರಿಣಾಮಕಾರಿ ಸಂರಕ್ಷಣೆ ಸಾಧ್ಯ. 'ಕಾಡು ನನ್ನದು' ಎಂಬ ಭಾವನೆ ಪ್ರತಿಯೊಬ್ಬರಲ್ಲೂ ಮೂಡಬೇಕು. ಹಿಂದೆ ಕಳ್ಳಸಾಗಣೆ ಹಾಗೂ ಕಾಡುಗಳ್ಳರ ದಾಳಿಯಿಂದ ಹುತಾತ್ಮರಾಗುವವರ ಸಂಖ್ಯೆ ಹೆಚ್ಚಿತ್ತು. ಈಗ ಇಲಾಖೆಯ ಸಂರಕ್ಷಣಾ ಕ್ರಮಗಳಿಂದ ವನ್ಯಜೀವಿಗಳ ಸಂಖ್ಯೆ ಗಣನೀಯವಾಗಿ ಹೆಚ್ಚಿದೆ. ದೇಶದಲ್ಲೇ ಅತಿ ಹೆಚ್ಚು ಆನೆಗಳು, ಎರಡನೇ ಅತಿ ಹೆಚ್ಚು ಹುಲಿಗಳು ಹಾಗೂ ಮೂರನೇ ಅತಿ ಹೆಚ್ಚು ಚಿರತೆಗಳು ಕರ್ನಾಟಕದಲ್ಲಿವೆ ಎಂದರು.

ರಾಜಸ್ಥಾನದ ಖೇಜರ್ಲಿಯಲ್ಲಿ ಮರಗಳ ರಕ್ಷಣೆಗಾಗಿ ಗ್ರಾಮಸ್ಥರು ಮಾಡಿದ ಬಲಿದಾನ ಹಾಗೂ ಕರ್ನಾಟಕದಲ್ಲಿ ವೀರಪ್ಪನ್ ವಿರುದ್ಧದ ಕಾರ್ಯಾಚರಣೆಯಲ್ಲಿ ಐಎಫ್‌ಎಸ್ ಅಧಿಕಾರಿ ಶ್ರೀನಿವಾಸ್ ಸೇರಿದಂತೆ ಹುತಾತ್ಮರಾದವರ ತ್ಯಾಗವನ್ನು ಸ್ಮರಿಸುವ ಉದ್ದೇಶದಿಂದ ಈ ದಿನಾಚರಣೆ ಆಚರಿಸಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಹುತಾತ್ಮರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಗದಗದಲ್ಲಿ ಬ್ಯಾಂಕ್ ನೌಕರರ ಪ್ರತಿಭಟನೆ

**ವಿಜಯಸಾಕ್ಷಿ ಸುದ್ದಿ**

**ಗದಗ:** ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ ಕರೆ ನೀಡಿದ್ದ ರಾಷ್ಟ್ರವ್ಯಾಪಿ ಮುಷ್ಕರಕ್ಕೆ ಸ್ಪಂದಿಸಿ ಗದಗ ನಗರದ ಗಾಂಧಿ ಸರ್ಕಲ್‌ನ ಕೆನರಾ ಬ್ಯಾಂಕ್ ಮುಂಭಾಗ ಶುಕ್ರವಾರ ಬ್ಯಾಂಕ್ ನೌಕರರು ಹಾಗೂ ಅಧಿಕಾರಿಗಳು ಪ್ರತಿಭಟನೆ ನಡೆಸಿದರು. ಜಿಲ್ಲೆಯ ವಿವಿಧ ಬ್ಯಾಂಕ್‌ಗಳ ಬಹುತೇಕ ಸಿಬ್ಬಂದಿ ಕರ್ತವ್ಯದಿಂದ ದೂರ ಉಳಿದು ಮುಷ್ಕರದಲ್ಲಿ ಪಾಲ್ಗೊಂಡರು. ಸಭೆಯನ್ನು ಉದ್ದೇಶಿಸಿ ಮಾತನಾಡಿದ ಯೂನಿಯನ್ ಪ್ರತಿನಿಧಿಗಳು, ಪರಿಷ್ಕೃತ ಸಾಧನೆ ಆಧಾರಿತ ಪ್ರೋತ್ಸಾಹಧನ ಯೋಜನೆಯಲ್ಲಿನ ಅಸಮಾನತೆಯನ್ನು ಖಂಡಿಸಿದರು. ಮಾತುಕತೆ ನಡೆಯುತ್ತಿರುವಾಗಲೇ ಯೋಜನೆ ಜಾರಿಗೊಳಿಸಿರುವುದು ಸರಿಯಲ್ಲ ಎಂದು ಆಕ್ಷೇಪಿಸಿದರು. 2023ರ ಡಿಸೆಂಬರ್‌ನಲ್ಲಿ ಒಪ್ಪಿಗೆಯಾಗಿದ್ದ ಐದು ದಿನಗಳ ಬ್ಯಾಂಕಿಂಗ್ ವಾರವನ್ನು ಇನ್ನೂ ಜಾರಿಗೊಳಿಸದಿರುವುದಕ್ಕೂ ಅಸಮಾಧಾನ ವ್ಯಕ್ತಪಡಿಸಿದರು. ಮುಷ್ಕರದಿಂದ ಗ್ರಾಹಕರಿಗೆ ಉಂಟಾಗುವ ತೊಂದರೆಗೆ ವಿಷಾದ ವ್ಯಕ್ತಪಡಿಸಿದ ನಾಯಕರು, ನೆಟ್ ಬ್ಯಾಂಕಿಂಗ್ ಹಾಗೂ ಮೊಬೈಲ್ ಬ್ಯಾಂಕಿಂಗ್ ಸೇವೆಗಳು ಲಭ್ಯವಿರುತ್ತವೆ ಎಂದು ತಿಳಿಸಿದರು. ಬೇಡಿಕೆ ಈಡೇರದಿದ್ದರೆ ಸೆ.28ರಿಂದ 30ರವರೆಗೆ ಮೂರು ದಿನಗಳ ಮುಷ್ಕರ ಹಾಗೂ ಅ.26ರಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸುವ ಎಚ್ಚರಿಕೆ ನೀಡಿದರು. ಮುಷ್ಕರದಲ್ಲಿ ಹನುಮೇಶ್ ಎಂ. ಗಂಗರಾಹುತಿ, ಎಚ್ಚರ ಸ್ವಾಮಿ ಎಸ್. ನಾಯಕ್, ಅಮರೇಶ್ವರ ಕೆ., ಸಿದ್ದಲಿಂಗಪ್ಪ ಉಮಾಚಗಿ, ಮಂಜುನಾಥ ದೊಡ್ಡಮನಿ, ಬಾಲಾಜಿ ಕುಲಕರ್ಣಿ, ಪ್ರೇಮ್, ಶಿವಾನಂದ, ಲೋಕೇಶ್, ಪಂಪಾಪತಿ, ವಿಶಾಲ್ ನಾಯಕ್, ಹರೀಶ್, ವಿಜಯಲಕ್ಷ್ಮೀ ಅಂಗಡಿ ಹಾಗೂ ಅಕ್ಷತಾ ಸೇರಿದಂತೆ ವಿವಿಧ ಬ್ಯಾಂಕ್ ಸಿಬ್ಬಂದಿ ಪಾಲ್ಗೊಂಡಿದ್ದರು.

## ಸೆ.15ರಂದು ಪ್ರಜಾಪ್ರಭುತ್ವ ದಿನಾಚರಣೆ

**ವಿಜಯಸಾಕ್ಷಿ ಸುದ್ದಿ**

**ಗದಗ:** ಸೆ.15ರಂದು ಬೆಳಗ್ಗೆ 10ಕ್ಕೆ ಜಿಲ್ಲಾ ಆಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಅಂತರ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ನಡೆಯಲಿದೆ. ಜನಪ್ರತಿನಿಧಿಗಳು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಸಮುದಾಯಗಳ ಮುಖಂಡರು, ಗಣ್ಯರು ಹಾಗೂ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಪಾಲ್ಗೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ

## ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ**

**ಗದಗ:** ಪರಿಶಿಷ್ಟ ಪಂಗಡದ ಜನಾಂಗದ ಏಳಿಗೆಗಾಗಿ ಶ್ರಮಿಸಿದ ಹಾಗೂ ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪರಿಶಿಷ್ಟ ಪಂಗಡದ ಸಾಧಕರಿಗೆ ನೀಡುವ 2026ನೇ ಸಾಲಿನ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆ.27 ಕೊನೆಯ ದಿನವಾಗಿದ್ದು, ಉಪನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ರೂಂ ನಂ.107, ಜಿಲ್ಲಾ ಆಡಳಿತ ಭವನ, ಗದಗ ಇಲ್ಲಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಡಿಇಎಲ್‌ಇಡಿ, ಡಿಪಿಇಡಿ, ಡಿಪಿ–ಎಸ್‌ಇ ಸೀಟು ಭರ್ತಿಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ**

**ಗದಗ:** 2026–27ನೇ ಸಾಲಿನ ಡಿಇಎಲ್‌ಇಡಿ, ಡಿಪಿಇಡಿ ಹಾಗೂ ಡಿಪಿಎಸ್‌ಇ ಕೋರ್ಸ್‌ಗಳ ಸರಕಾರಿ ಕೋಟಾದಡಿ ಹಂಚಿಕೆಯಾಗದೆ ಉಳಿದಿರುವ ಸೀಟುಗಳನ್ನು ಆಡಳಿತ ಮಂಡಳಿ ಮೂಲಕ ಭರ್ತಿ ಮಾಡಿಕೊಳ್ಳಲು ಸೆ.15ರವರೆಗೆ ಅವಕಾಶವಿದೆ. ಹೆಚ್ಚಿನ ಮಾಹಿತಿಗಾಗಿ ಶಾಲಾ ಶಿಕ್ಷಣ ಇಲಾಖೆಯ ವೆಬ್‌ಸೈಟ್ ಅಥವಾ ಡಯಟ್ ಗದಗದ ನೋಡಲ್ ಅಧಿಕಾರಿ ಜಿ.ಡಿ. ದಾಸರ ಅವರನ್ನು 9886082433ಕ್ಕೆ ಸಂಪರ್ಕಿಸಬಹುದು.

## ನಾಳೆ ನಿವೇಶನ ಅರ್ಜಿದಾರರ ಸಭೆ

**ವಿಜಯಸಾಕ್ಷಿ ಸುದ್ದಿ**

**ಗದಗ:** ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ 1990ರಲ್ಲಿ ನಿವೇಶನಕ್ಕಾಗಿ ಅರ್ಜಿ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಿದ್ದ ನಿವೇಶನ ರಹಿತರ ಗದಗ–ಬೆಟಗೇರಿ ಸಾರ್ವಜನಿಕರ ಕ್ಷೇಮಾಭಿವೃದ್ಧಿ ಸಂಘದ ಸಭೆ ಸೆ.13ರಂದು ಬೆಳಗ್ಗೆ 10.30ಕ್ಕೆ ಗದಗ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ನಡೆಯಲಿದೆ. ಸಂಘದ ಅಧ್ಯಕ್ಷ ಎಂ.ಐ. ಗುಡಸಲಮನಿ ಅಧ್ಯಕ್ಷತೆ ವಹಿಸುವರು. ಅರ್ಜಿದಾರರಿಗೆ ನಿವೇಶನ ಒದಗಿಸಲು ಸಂಘ ಕೈಗೊಂಡಿರುವ ಹೋರಾಟ ಹಾಗೂ ಇತ್ತೀಚಿನ ವಿದ್ಯಮಾನಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು. ಅರ್ಜಿದಾರರು ಸಕಾಲಕ್ಕೆ ಆಗಮಿಸಬೇಕು ಎಂದು ಸಂಘದ ಕಾರ್ಯದರ್ಶಿ ಝುಡ್.ಡಿ. ಬೇಲೇರಿ ತಿಳಿಸಿದ್ದಾರೆ.

### ಲಕ್ಕುಂಡಿಯಲ್ಲಿ ಸಾರಿಗೆ ಅವ್ಯವಸ್ಥೆ ವಿರುದ್ಧ ಆಕ್ರೋಶ

# ಬಸ್‌ಗಾಗಿ ವಿದ್ಯಾರ್ಥಿ–ಪಾಲಕರ ಪ್ರತಿಭಟನೆ

**ವಿಜಯಸಾಕ್ಷಿ ಸುದ್ದಿ**

**ಲಕ್ಕುಂಡಿ:** ಶಾಲಾ ಸಮಯಕ್ಕೆ ಸಮರ್ಪಕ ಬಸ್ ಸೌಲಭ್ಯ ಇಲ್ಲದೆ ತೊಂದರೆ ಅನುಭವಿಸುತ್ತಿರುವ ವಿದ್ಯಾರ್ಥಿಗಳು, ಪಾಲಕರು ಹಾಗೂ ಕೂಲಿ ಕಾರ್ಮಿಕರು ಶುಕ್ರವಾರ ಲಕ್ಕುಂಡಿ ಬಸ್ ನಿಲ್ದಾಣದಲ್ಲಿ ಬಸ್‌ಗಳನ್ನು ತಡೆದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವಿರುದ್ಧ ಧಿಡೀರ್ ಪ್ರತಿಭಟನೆ ನಡೆಸಿದರು.

ಕಳೆದ ಒಂದು ತಿಂಗಳಿಂದ ಬೆಳಗ್ಗೆ ಶಾಲಾ–ಕಾಲೇಜು ಸಮಯಕ್ಕೆ ಸಮರ್ಪಕ ಬಸ್‌ಗಳು ಸಂಚರಿಸದ ಪರಿಣಾಮ ವಿದ್ಯಾರ್ಥಿಗಳು ಗಂಟೆಗಟ್ಟಲೆ ಬಸ್‌ಗಾಗಿ ಕಾಯುವಂತಾಗಿದೆ. ಇದರಿಂದ ಸಮಯಕ್ಕೆ ಶಾಲೆಗೆ ತೆರಳಲು ಸಾಧ್ಯವಾಗದೆ ಶಿಕ್ಷಕರು ತರಗತಿಯಿಂದ ಹೊರಗೆ ನಿಲ್ಲಿಸುತ್ತಿದ್ದಾರೆ ಎಂದು ವಿದ್ಯಾರ್ಥಿಗಳು ಅಳಲು ತೋಡಿಕೊಂಡರು.

ಪ್ರತಿಭಟನಾಕಾರರು ಬಸ್ ನಿಲ್ದಾಣದಲ್ಲಿ 10ಕ್ಕೂ ಹೆಚ್ಚು ಬಸ್‌ಗಳನ್ನು ತಡೆದು ಸಾರಿಗೆ ಸಂಸ್ಥೆ ವಿರುದ್ಧ ಘೋಷಣೆ ಕೂಗಿದರು. ಎರಡು ಗಂಟೆಗೂ ಹೆಚ್ಚು ಕಾಲ ಪ್ರತಿಭಟನೆ ನಡೆದ ಹಿನ್ನೆಲೆಯಲ್ಲಿ ಗದಗ, ಹುಬ್ಬಳ್ಳಿ, ಕೊಪ್ಪಳ, ವಿಜಯನಗರ, ರಾಯಚೂರು, ಬೆಳಗಾವಿ, ಹಾವೇರಿ ಹಾಗೂ ಬಳ್ಳಾರಿ ಕಡೆಗೆ ತೆರಳುವ ಪ್ರಯಾಣಿಕರು ಪರದಾಡಿದರು.

ಬೆಳಗ್ಗೆ 8ರಿಂದ 10ರವರೆಗೆ ಗದಗ ಹಾಗೂ ಹುಬ್ಬಳ್ಳಿಗೆ ಶಾಲಾ–ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುತ್ತದೆ. ಈ ಅವಧಿಯಲ್ಲಿ ಬಸ್ ಕೊರತೆಯಿಂದ ವಿದ್ಯಾರ್ಥಿಗಳು ನೂಕುನುಗ್ಗಲಿನ ನಡುವೆ ಸಂಚರಿಸುವಂತಾಗಿದೆ. ಈ ಕುರಿತು ಹಲವು ಬಾರಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಕ್ರಮ ಕೈಗೊಂಡಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು.




### ಪೊಲೀಸರ ವಿರುದ್ಧವೂ ಆಕ್ರೋಶ

ಪ್ರತಿಭಟನೆ ವೇಳೆ ಪೊಲೀಸರು ವಿದ್ಯಾರ್ಥಿಗಳಿಗೆ ಅವಾಚ್ಯ ಶಬ್ದ ಬಳಸಿದ್ದಾರೆ ಎಂದು ಆರೋಪಿಸಿ ಪಾಲಕರು ಹಾಗೂ ಸಾರ್ವಜನಿಕರು ಆಕ್ಷೇಪ ವ್ಯಕ್ತಪಡಿಸಿದರು. ಈ ವೇಳೆ ಪೊಲೀಸರು ಹಾಗೂ ಸಾರ್ವಜನಿಕರ ನಡುವೆ ಕೆಲಕಾಲ ವಾಗ್ವಾದ, ಗದ್ದಲದ ವಾತಾವರಣ ನಿರ್ಮಾಣವಾಯಿತು.

> ಎಂಟು ತಿಂಗಳ ಹಿಂದೆ ಇದೇ ಸಮಸ್ಯೆ ಕುರಿತು ಪ್ರತಿಭಟನೆ ನಡೆಸಿದಾಗ ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸುವ ಭರವಸೆ ನೀಡಿದ್ದರು. ಒಂದು ವಾರ ಮಾತ್ರ ಬಸ್ ಓಡಿಸಿ ಮತ್ತೆ ಸ್ಥಗಿತಗೊಳಿಸಲಾಗಿದೆ. ಒಂದು ವಾರದೊಳಗೆ ಸಮಸ್ಯೆ ಬಗೆಹರಿಸದಿದ್ದರೆ ವಿದ್ಯಾರ್ಥಿಗಳೊಂದಿಗೆ ತೀವ್ರ ಪ್ರತಿಭಟನೆ ನಡೆಸಲಾಗುವುದು."
>
> **– ಬಸವರಾಜ ಮುಳ್ಳಾಳ, ಬಸನಗೌಡ ಬಿರಾದಾರ, ವೀರೇಶ ಮುಸ್ಕಿನಭಾವಿ, ಪಾಲಕರು**

ಸ್ಥಳಕ್ಕೆ ಆಗಮಿಸಿದ ಗದಗ ಬಸ್ ನಿಲ್ದಾಣದ ನಿಯಂತ್ರಣಾಧಿಕಾರಿಯನ್ನು ವಿದ್ಯಾರ್ಥಿಗಳು ಹಾಗೂ ಪಾಲಕರು ತರಾಟೆಗೆ ತೆಗೆದುಕೊಂಡರು. ಸಮಸ್ಯೆ ಬಗೆಹರಿಸದಿದ್ದರೆ ಸಾರಿಗೆ ಸಚಿವರು ಹಾಗೂ ಮುಖ್ಯಮಂತ್ರಿಗೆ ದೂರು ನೀಡುವುದಾಗಿ ಎಚ್ಚರಿಸಿದರು. ಮುಂದಿನ ನಾಲ್ಕೈದು ದಿನಗಳಲ್ಲಿ ವಿದ್ಯಾರ್ಥಿಗಳ ಶಾಲಾ ಸಮಯಕ್ಕೆ ಬಸ್ ವ್ಯವಸ್ಥೆ ಕಲ್ಪಿಸಲು ವಿಭಾಗೀಯ ವ್ಯವಸ್ಥಾಪಕರೊಂದಿಗೆ ಚರ್ಚಿಸುವುದಾಗಿ ಬಸ್ ನಿಲ್ದಾಣದ ಮೇಲ್ವಿಚಾರಕ ತಿಮ್ಮನಗೌಡ ಭರವಸೆ ನೀಡಿದರು. ಬೈಪಾಸ್‌ನಲ್ಲಿ ಸಂಚರಿಸುವ ಬಸ್‌ಗಳನ್ನು ಲಕ್ಕುಂಡಿ ನಿಲ್ದಾಣಕ್ಕೆ ಬರುವಂತೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ ಬಳಿಕ ಪ್ರತಿಭಟನೆ ಹಿಂಪಡೆಯಲಾಯಿತು.


## ಇಂದು ಬೆಟಗೇರಿಯಲ್ಲಿ ಪ್ರಜಾ ಸೇವಾ ಆಂದೋಲನ

**ವಿಜಯಸಾಕ್ಷಿ ಸುದ್ದಿ**

**ಗದಗ:** ಬೆಟಗೇರಿ ಹೋಬಳಿ ವ್ಯಾಪ್ತಿಯ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಉದ್ದೇಶದಿಂದ ಹೋಬಳಿ ಮಟ್ಟದ ಪ್ರಜಾ ಸೇವಾ ಆಂದೋಲನ ಸಭೆ ಸೆ.12ರಂದು ಬೆಳಗ್ಗೆ 10.30ಕ್ಕೆ ಬೆಟಗೇರಿಯ ತಾರಾಲಯದಲ್ಲಿ ನಡೆಯಲಿದೆ.

ಗದಗ ಶಾಸಕ ಡಾ. ಎಚ್.ಕೆ. ಪಾಟೀಲ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸಭೆಯಲ್ಲಿ ಸಾರ್ವಜನಿಕರು ತಮ್ಮ ಸಮಸ್ಯೆಗಳು, ಅಹವಾಲುಗಳು ಹಾಗೂ ಅಗತ್ಯ ಸೇವೆಗಳಿಗೆ ಸಂಬಂಧಿಸಿದ ಮನವಿಗಳನ್ನು ಸಲ್ಲಿಸಿ, ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳೊಂದಿಗೆ ಪರಿಹಾರ ಕಂಡುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಸಾರ್ವಜನಿಕರ ಅಹವಾಲುಗಳಿಗೆ ಸ್ಥಳದಲ್ಲಿಯೇ ಸ್ಪಂದಿಸುವುದು ಹಾಗೂ ಸರ್ಕಾರದ ವಿವಿಧ ಜನಪರ ಯೋಜನೆಗಳು



ಮತ್ತು ಸೇವೆಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಮಾಡುವುದು ಸಭೆಯ ಉದ್ದೇಶವಾಗಿದೆ.

ಬೆಟಗೇರಿ ಹೋಬಳಿ ವ್ಯಾಪ್ತಿಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಭೆಯ ಸದುಪಯೋಗ ಪಡೆದುಕೊಳ್ಳುವಂತೆ ತಹಸೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ ಕೋರಿದ್ದಾರೆ.

## ನೇಮಕಾತಿಗೆ ತಡೆ; ಸದ್ಯಕ್ಕೆ ಪೌರ ಕಾರ್ಮಿಕರ ಹೋರಾಟಕ್ಕೆ ವಿರಾಮ!

**ವಿಜಯಸಾಕ್ಷಿ ಸುದ್ದಿ**

**ಗದಗ:** ಗದಗ–ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಹಲವು ವರ್ಷಗಳಿಂದ ಸ್ವಚ್ಛತಾ ಕಾರ್ಯ ಹಾಗೂ ಮನೆ–ಮನೆಗೆ ತೆರಳಿ ಕಸ ಸಂಗ್ರಹಿಸುತ್ತಿರುವ ಮಹಿಳಾ ಕಾರ್ಮಿಕರನ್ನು ಕಡೆಗಣಿಸಿ 154 ಪೌರಕಾರ್ಮಿಕರ ನೇಮಕಾತಿಗೆ ಮುಂದಾಗಿರುವುದನ್ನು ವಿರೋಧಿಸಿ ಐದು ದಿನಗಳಿಂದ ನಡೆಯುತ್ತಿದ್ದ ಪ್ರತಿಭಟನೆಗೆ ಸದ್ಯಕ್ಕೆ ವಿರಾಮ ದೊರೆತಿದೆ.

ಶುಕ್ರವಾರ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು, ಜಿಲ್ಲಾಡಳಿತದಿಂದ ಹೊರಡಿಸಲಾಗಿದ್ದ 154 ಪೌರಕಾರ್ಮಿಕರ ನೇಮಕಾತಿ ಅಧಿಸೂಚನೆಯನ್ನು ತಡೆಹಿಡಿಯಲಾಗಿದೆ ಎಂದು ತಿಳಿಸಿದರು. ಅಲ್ಲದೆ, ಸಮಸ್ಯೆ ಕುರಿತು ಮುಂದಿನ ಹಂತದಲ್ಲಿ ಚರ್ಚಿಸಿ ಪರಿಹಾರ ಕಂಡುಕೊಳ್ಳುವ ಭರವಸೆ ನೀಡಿ ಪ್ರತಿಭಟನೆ ಕೈಬಿಡುವಂತೆ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಮಹಿಳಾ ಕಾರ್ಮಿಕರು ಪ್ರತಿಭಟನೆ ಅಂತ್ಯಗೊಳಿಸಿದರು.

ನಗರಸಭೆ ವ್ಯಾಪ್ತಿಯಲ್ಲಿ ಹಲವು ವರ್ಷಗಳಿಂದ ನಿರಂತರವಾಗಿ ಕೆಲಸ ಮಾಡುತ್ತಿರುವ ಕಾರ್ಮಿಕರ ಸೇವಾವಧಿಯನ್ನು ಪರಿಗಣಿಸಿ, ನೇರ ಪಾವತಿ ವ್ಯವಸ್ಥೆಯಡಿ ಪೌರಕಾರ್ಮಿಕರ ಹುದ್ದೆಗಳಿಗೆ ಕಾಯಂಗೊಳಿಸಬೇಕು ಎಂಬುದು ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿದೆ.

ಸುಮಾರು 20 ವರ್ಷಗಳಿಂದ ಮನೆ–ಮನೆಗೆ ತೆರಳಿ ಕಸ ಸಂಗ್ರಹಿಸುವುದು ಸೇರಿದಂತೆ ನಗರದ ಸ್ವಚ್ಛತಾ ಕಾರ್ಯದಲ್ಲಿ ತೊಡಗಿರುವ ಕಾರ್ಮಿಕರು ಕಡಿಮೆ ಆದಾಯದಲ್ಲೇ ಕುಟುಂಬ ನಿರ್ವಹಿಸುತ್ತಿದ್ದಾರೆ. ಹೊಸದಾಗಿ ನೇಮಕಾತಿ ಕೈಗೊಂಡರೆ ತಮ್ಮ ಉದ್ಯೋಗ ಕಳೆದುಕೊಳ್ಳುವ ಆತಂಕವಿದೆ ಎಂದು ಅವರು ಅಳಲು ತೋಡಿಕೊಂಡಿದ್ದರು.

ಈ ಹಿನ್ನೆಲೆಯಲ್ಲಿ ಶಾಸಕ ಡಾ. ಎಚ್.ಕೆ. ಪಾಟೀಲ ಅವರ ನೇತೃತ್ವದಲ್ಲಿ ಸೆ.22ರಂದು ಬೆಂಗಳೂರಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಮುಖಂಡರ ಸಭೆ ನಡೆಯಲಿದೆ.

ಪೌರಕಾರ್ಮಿಕರ ಬೇಡಿಕೆಗಳ ಕುರಿತು ಸಭೆಯಲ್ಲಿ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಲಾಗಿದೆ.

ಪ್ರಸ್ತುತ ಪ್ರತಿಭಟನೆ ಹಿಂಪಡೆದಿದ್ದರೂ, ಬೆಂಗಳೂರಿನ ಸಭೆಯಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರ ಪರವಾಗಿ ನ್ಯಾಯಯುತ ನಿರ್ಧಾರ ಕೈಗೊಳ್ಳಬೇಕು. ಬೇಡಿಕೆ ಈಡೇರದಿದ್ದರೆ ಮತ್ತೆ ಪ್ರತಿಭಟನೆ ಆರಂಭಿಸಿ ಹೋರಾಟವನ್ನು ತೀವ್ರಗೊಳಿಸುವುದಾಗಿ ಮಹಿಳಾ ಕಾರ್ಮಿಕರು ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಕೃಷ್ಣಾ ಪರಾಪುರ, ಯುವರಾಜ ಬಳ್ಳಾರಿ, ಪೃಥ್ವಿ ಪರಾಪುರ, ವಿಜಯ ಕಲ್ಮನಿ, ಉಡಚಪ್ಪ ಹಳ್ಳಿಕೇರಿ, ನಿಂಗಪ್ಪ ದೊಡ್ಡಮನಿ, ಚಂದ್ರು ಕೋನಿಮನಿ, ಗಣೇಶ ಹುಬ್ಬಳ್ಳಿ ಸೇರಿದಂತೆ ನಾಗಮ್ಮ ಬಳ್ಳಾರಿ, ಯಶೋದಾ ಬಳ್ಳಾರಿ, ದಂಡಕ್ಕ ಬಳ್ಳಾರಿ, ಕನಕವ್ವ ದೊಡ್ಡಮನಿ, ಅನಿತಾ ಯಳವತ್ತಿ, ರಾಜೇಶ್ವರಿ, ಜ್ಯೋತಿ ಮತ್ತಿತರ ಮಹಿಳಾ ಪೌರಕಾರ್ಮಿಕರು ಉಪಸ್ಥಿತರಿದ್ದರು.

# ಸೆ.17ರಂದು ಶ್ರೀ ವಿಶ್ವಕರ್ಮ ಜಯಂತಿ

**ವಿಜಯಸಾಕ್ಷಿ ಸುದ್ದಿ**

**ಗದಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶ್ರೀ ವಿಶ್ವಕರ್ಮ ಜಯಂತಿ–2026 ಕಾರ್ಯಕ್ರಮವನ್ನು ಸೆ.17ರಂದು ಬೆಳಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಆಯೋಜಿಸಲಾಗಿದೆ.

ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್, ವಿಧಾನಸಭೆ ಸಭಾಧ್ಯಕ್ಷ ಜಿ.ಎಸ್.ಪಾಟೀಲ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಘನ ಉಪಸ್ಥಿತಿ ವಹಿಸುವರು. ಉನ್ನತ ಶಿಕ್ಷಣ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಕಾರ್ಯಕ್ರಮ ಉದ್ಘಾಟಿಸುವರು. ಗದಗ ಶಾಸಕ ಡಾ. ಎಚ್.ಕೆ.ಪಾಟೀಲ ಅಧ್ಯಕ್ಷತೆ ವಹಿಸುವರು.

ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್.ಪಾಟೀಲ, ಶಾಸಕರಾದ ಸಿ.ಸಿ.ಪಾಟೀಲ, ಡಾ. ಚಂದ್ರು ಲಮಾಣಿ, ಬಸವರಾಜ ಹೊರಟ್ಟಿ, ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಹಾಗೂ ಅಶೋಕ ಮಂದಾಲಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಸಹಕಾರ ಸಂಘಗಳ ನಿಬಂಧಕರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ ಮತ್ತು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ. ಪಾಲ್ಗೊಳ್ಳುವರು.

ನಿವೃತ್ತ ಶಿಕ್ಷಕ ಹಾಗೂ ಸಾಹಿತಿ ಬಿ.ಎಂ. ಯರಕದ ಉಪನ್ಯಾಸ ನೀಡುವರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್. ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಪ್ಥಿ. ಬಳ್ಳಾರಿ ಸ್ವಾಗತ ಕೋರಿದ್ದಾರೆ.

### ಡಾ. ಉಮಾಶ್ರೀ ಅವರ ಏಕವ್ಯಕ್ತಿ ಅಭಿನಯದಲ್ಲಿ ಆತ್ಮಗೌರವ, ಪ್ರತಿರೋಧ ಮತ್ತು ಮಾನವೀಯತೆಯ ಮಹಾರಂಗ

# ಪುರಾಣದ ಶರ್ಮಿಷ್ಠೆ, ವರ್ತಮಾನದ ಹೆಣ್ಣಿನ ಧ್ವನಿ!

ಐತಿಹಾಸಿಕ ಗದುಗಿನ ಪಂಡಿತ ಭೀಮಸೇನ ಜೋಶಿ ರಂಗಮಂದಿರದಲ್ಲಿ ಸೆ.9ರ ರಾತ್ರಿ ನಡೆದ 'ಶರ್ಮಿಷ್ಠೆ' ನಾಟಕದ ಪ್ರದರ್ಶನ ಕೇವಲ ಪೌರಾಣಿಕ ಕಥೆ ಯ ರಂಗರೂಪವಾಗಿರಲಿಲ್ಲ. ಪುರಾಣದ ನೆರಳಿನಿಂದ ಹೊರಬಂದು ವರ್ತಮಾನದ ಹೆಣ್ಣಿನ ಅಂತರಂಗ, ನೋವು, ಪ್ರತಿರೋಧ, ಆತ್ಮಗೌರವ ಹಾಗೂ ಅಸ್ತಿತ್ವದ ಪ್ರಶ್ನೆಗಳನ್ನು ಪ್ರೇಕ್ಷಕರ ಮುಂದಿಟ್ಟ ವಿಶಿಷ್ಟ ರಂಗಾನುಭವವಾಗಿತ್ತು.

ಡಾ. ಬೇಲೂರು ರಘುನಂದನ್ ಅವರ ರಚನೆ, ಹಿರಿಯ ರಂಗಕಲಾವಿದೆ ಡಾ. ಉಮಾಶ್ರೀ ಅವರ ಅಪೂರ್ವ ಅಭಿನಯ ಹಾಗೂ ಚಿದಂಬರ ರಾವ್ ಜಂಬೆ ಅವರ ನಿರ್ದೇಶನ 'ಶರ್ಮಿಷ್ಠೆ'ಯನ್ನು ಪರಿಣಾಮಕಾರಿ ರಂಗಪ್ರಯೋಗವನ್ನಾಗಿ ರೂಪಿಸಿವೆ. ಕಥೆಯ ಕೇಂದ್ರದಲ್ಲಿ ಶರ್ಮಿಷ್ಠೆಯಿದ್ದರೂ, ಆಕೆಯ ಸಂಘರ್ಷದ ಪ್ರತಿಧ್ವನಿ ಇಂದಿನ ಹೆಣ್ಣಿನ ಬದುಕಿನಲ್ಲೂ ಕೇಳಿಸುವಂತಿತ್ತು.

**ಪುರಾಣದ ಪಾತ್ರವಲ್ಲ; ಸಂಘರ್ಷದ ಪ್ರತೀಕ**

'ಯಯಾತಿ' ಪುರಾಣದಲ್ಲಿ ಶರ್ಮಿಷ್ಠೆ ಒಂದು ಪಾತ್ರ. ಆದರೆ ಇಲ್ಲಿ ಆಕೆ ಕೇವಲ ದಾಸಿಯಲ್ಲ. ಅಧಿಕಾರದ ಎದುರು ಅಸಹಾಯಕಳಾಗುವ ಮಹಿಳೆ, ಅವಮಾನವನ್ನು ಎದುರಿಸುವ ವ್ಯಕ್ತಿ, ತನ್ನ ಅಸ್ತಿತ್ವ ಉಳಿಸಿಕೊಳ್ಳಲು ಹೋರಾಡುವ ಹೆಣ್ಣು ಹಾಗೂ ತಾಯ್ತನ–ಆತ್ಮಗೌರವದ ನಡುವೆ ಸಿಲುಕುವ ಮನಸ್ಸಿನ ಪ್ರತಿರೂಪ.

ಡಾ. ರಘುನಂದನ್ ಅವರು ಪುರಾಣವನ್ನು ಪುನರ್‌ಕಥನ ಮಾಡುವ ಬದಲು ಅದರೊಳಗಿನ ಅಧಿಕಾರ, ವರ್ಣಭೇದ, ಪಿತೃಪ್ರಧಾನತೆ, ಪ್ರತಿರೋಧ ಮತ್ತು ಮಾನವೀಯತೆಯ ಪ್ರಶ್ನೆಗಳನ್ನು ಸಮಕಾಲೀನ ದೃಷ್ಟಿಕೋನದಲ್ಲಿ ಕಟ್ಟಿಕೊಟ್ಟಿದ್ದಾರೆ.




**ಏಕವ್ಯಕ್ತಿ ನಾಟಕ; ಆದರೆ ಏಕಾಂಗಿಯಲ್ಲ**

ರಂಗದ ಮೇಲೆ ಒಬ್ಬರೇ ನಟಿಸಿದ್ದರೂ ಉಮಾಶ್ರೀ ಅವರ ಅಭಿನಯದಲ್ಲಿ ಶರ್ಮಿಷ್ಠೆ, ಯಯಾತಿ, ದೇವಯಾನಿ, ಕಚದೇವ, ರಾಜಮಾತೆ ಸೇರಿದಂತೆ ಹಲವು ಪಾತ್ರಗಳ ಭಾವಲೋಕ ಜೀವಂತವಾಯಿತು. ಧ್ವನಿಯ ಏರಿಳಿತ, ದೇಹಭಾಷೆ, ಕಣ್ಣುಗಳ ಚಲನೆ, ಮುಖಭಾವ ಹಾಗೂ ಮೌನದ ಮೂಲಕ ಪಾತ್ರಗಳನ್ನು ಬದಲಾಯಿಸುವ ಅವರ ಅಭಿನಯ ಪ್ರೇಕ್ಷಕರನ್ನು ಹಿಡಿದಿಟ್ಟಿತು.

ನೋವಿನ ದೃಶ್ಯದಲ್ಲಿ ಕಣ್ಣೀರಿಗಿಂತ ಮೊದಲು ಮೂಡುವ ಮೌನ, ಅವಮಾನ ಎದುರಾದಾಗ ದೇಹಭಾಷೆಯಲ್ಲಿ ವ್ಯಕ್ತವಾಗುವ ಪ್ರತಿರೋಧ ಹಾಗೂ ತಾಯ್ತನದ ನೋವಿನ ಸಂದರ್ಭದಲ್ಲಿ ಧ್ವನಿಯಲ್ಲಿನ ನಡುಕ–ಅವರ ಅಭಿನಯದ ಗಾಢತೆಯನ್ನು ತೆರೆದಿಟ್ಟವು.

**ಪುರಾಣದೊಳಗೆ ವರ್ತಮಾನದ ಪ್ರಶ್ನೆಗಳು**

ಹೆಣ್ಣಿನ ಮೇಲೆ ಅಧಿಕಾರ ಯಾರದು? ಅವಳ ದೇಹದ ಕುರಿತು ನಿರ್ಧರಿಸುವ ಹಕ್ಕು ಯಾರದು? ತಾಯ್ತನಕ್ಕಾಗಿ ಹೆಣ್ಣು ತನ್ನ ಅಸ್ತಿತ್ವ ಕಳೆದುಕೊಳ್ಳಬೇಕೇ? ಅವಮಾನವನ್ನು ಸಹಿಸುವುದೇ ಹೆಣ್ಣಿನ ವಿಧಿಯೇ? ಎಂಬ ಪ್ರಶ್ನೆಗಳು ನಾಟಕದುದ್ದಕ್ಕೂ ಪ್ರೇಕ್ಷಕರನ್ನು ಕಾಡುತ್ತವೆ.

ವಿಶೇಷವಾಗಿ ವಸ್ತ್ರಸಂಹಿತೆಯನ್ನು ಅಧಿಕಾರ ಮತ್ತು ಪಿತೃಪ್ರಧಾನ ನಿಯಂತ್ರಣದ ರೂಪಕವಾಗಿ ಬಳಸಿರುವುದು ಗಮನಾರ್ಹ. ಇಲ್ಲಿ ವಸ್ತ್ರ ಕೇವಲ ವೇಷವಲ್ಲ; ಸ್ವಾತಂತ್ರ್ಯವನ್ನು ನಿಯಂತ್ರಿಸುವ ಅಧಿಕಾರದ ಭಾಷೆಯಾಗಿದೆ.

**ಸೋತವಳಲ್ಲ; ಸ್ವಾಭಿಮಾನದ ಶರ್ಮಿಷ್ಠೆ**

ಶರ್ಮಿಷ್ಠೆ ಅವಮಾನ ಅನುಭವಿಸುತ್ತಾಳೆ, ದಾಸಿಯಾಗುತ್ತಾಳೆ, ತಾಯಿಯಾಗಿ ನೋವು ಅನುಭವಿಸುತ್ತಾಳೆ. ಆದರೆ ತನ್ನೊಳಗಿನ ಮನುಷ್ಯತ್ವ ಮತ್ತು ಆತ್ಮಗೌರವವನ್ನು ಉಳಿಸಿಕೊಳ್ಳುತ್ತಾಳೆ. ಇದೇ ಆಕೆಯ ನಿಜವಾದ ಗೆಲುವು.

'ಒಡಲಾಳ'ದ ಸಾಕವ್ವನ ಪಾತ್ರದ ಮೂಲಕ ಛಾಪು ಮೂಡಿಸಿರುವ ಉಮಾಶ್ರೀ, 'ಶರ್ಮಿಷ್ಠೆ'ಯಲ್ಲಿ ಹೊಸ ಹೆಣ್ಣಿನ ಅಸ್ತಿತ್ವವನ್ನು ಸೃಷ್ಟಿಸಿದ್ದಾರೆ. ಹೀಗಾಗಿ ಅವರ ಅಭಿನಯ ಕೇವಲ ಪಾತ್ರಧಾರಣೆಯಲ್ಲ; ಪಾತ್ರದೊಳಗೆ ಪ್ರವೇಶಿಸಿ ಅದರ ಮನಸ್ಸಾಗಿ ಹೊರಬರುವ ಪರಕಾಯ ಪ್ರವೇಶದ ಅನುಭವ ನೀಡುತ್ತದೆ.

'ಶರ್ಮಿಷ್ಠೆ' ಮುಗಿದರೂ ಅದರ ಪ್ರಶ್ನೆಗಳು ಪ್ರೇಕ್ಷಕರ ಮನಸ್ಸಿನಲ್ಲಿ ಮುಂದುವರಿಯುತ್ತವೆ. ಪೌರಾಣಿಕ ಕಥಾ ವಸ್ತುವನ್ನು ಆಧುನಿಕ ಚಿಂತನೆಯೊಂದಿಗೆ ಜೋಡಿಸಿದ ಈ ಪ್ರಯೋಗ ಕನ್ನಡ ರಂಗಭೂಮಿಯ ಸೃಜನಶೀಲ ಸಾಧ್ಯತೆಗಳಿಗೆ ಸಾಕ್ಷಿಯಾಗಿದೆ.

ನಾಟಕ ಮುಗಿದ ಮೇಲೂ ಮನಸ್ಸಿನಲ್ಲಿ ಉಳಿಯುವುದು ಯಯಾತಿಯ ತಾರುಣ್ಯವಲ್ಲ; ಶರ್ಮಿಷ್ಠೆಯ ಆತ್ಮಗೌರವ. ಅದೇ ನಾಟಕದ ಗೆಲುವು. ಅದೇ ಉಮಾಶ್ರೀ ಅವರ ಅಭಿನಯದ ಗೆಲುವು. ಶರ್ಮಿಷ್ಠೆ ರಂಗದ ಮೇಲೆ ಮುಗಿಯುವುದಿಲ್ಲ; ಪ್ರೇಕ್ಷಕರ ಮನಸ್ಸಿನಲ್ಲಿ ಮುಂದುವರಿಯುತ್ತಾಳೆ.

– ಅಮೀರನಾಯಕ (ಕಲ್ಲಿಗನೂರ)
ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯಿತಿ ಲಕ್ಕುಂಡಿ

# ಲಕ್ಕುಂಡಿಯಲ್ಲಿ 'ಬೇಟಿ ಬಚಾವೋ ಬೇಟಿ ಪಡಾವೋ'



ವಿಜಯಸಾಕ್ಷಿ ಸುದ್ದಿ

**ಲಕ್ಕುಂಡಿ:** ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಲಕ್ಕುಂಡಿಯ ಶ್ರೀ ಅನ್ನದಾನೇಶ್ವರ ಮಠದ ಸಭಾಭವನದಲ್ಲಿ ಸೆ. 9ರಂದು 'ಬೇಟಿ ಬಚಾವೋ ಬೇಟಿ ಪಡಾವೋ' ಕಾರ್ಯಕ್ರಮ ನಡೆಯಿತು.


ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶ ಹಾಗೂ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ ದೀಪ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ರಾಧಾ ಜಿ. ಮಣ್ಣೂರ, ಜಿಲ್ಲಾ ನಿರೂಪಣಾಧಿಕಾರಿ ಮಹಾಂತಸ್ವಾಮಿ ಪೂಜಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಜಯಶ್ರೀ ಆರ್. ಸೇರಿದಂತೆ ಅಧಿಕಾರಿಗಳು ಯೋಜನೆಯ ಭಿತ್ತಿಪತ್ರ ಬಿಡುಗಡೆ ಮಾಡಿದರು.

ನಂತರ ಗ್ರಾಮ ಪಂಚಾಯಿತಿ ಆವರಣ ಹಾಗೂ ಅಂಗನವಾಡಿ ಕೇಂದ್ರದಲ್ಲಿ ಅಧಿಕಾರಿಗಳು ಸಸಿ ನೆಟ್ಟರು.

ಕಾರ್ಯಕ್ರಮದಲ್ಲಿ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಪೋಷಣ ಮತ್ತು ಮಾತೃವಂದನಾ ಯೋಜನೆಗಳ ಜಿಲ್ಲಾ ಹಾಗೂ ತಾಲೂಕು ಸಂಯೋಜಕರು, ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆಯರು–ಸಹಾಯಕಿಂಯರು, ಸಾರ್ವಜನಿಕರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

ಮಹಾಂತಸ್ವಾಮಿ ಪೂಜಾರ ಸ್ವಾಗತಿಸಿದರು. ಮಂಜುಳಾ ಬುದ್ದಪ್ಪನವರ ನಿರೂಪಿಸಿದರು. ವಿನೋದಾ ಹೊಂಬಳ ವಂದಿಸಿದರು.

# ಗಣೇಶೋತ್ಸವಕ್ಕೆ 'ಶಾಂತಿ' ಮಂತ್ರ; ಡಿಜೆ, ಪಿಒಪಿಗೆ ಪೊಲೀಸ್ ಬ್ರೇಕ್



ವಿಜಯಸಾಕ್ಷಿ ಸುದ್ದಿ

**ಶಿರಹಟ್ಟಿ:** ಮುಂಬರುವ ಗಣೇಶ ಚತುರ್ಥಿಯನ್ನು ಸಾರ್ವಜನಿಕರು ಪರಿಸರ ಸ್ನೇಹಿ ಗಣಪತಿ ಮೂರ್ತಿಗಳನ್ನು ಪ್ರತಿಷ್ಠಾಪಿಸುವ ಮೂಲಕ ಶಾಂತಿಯುತವಾಗಿ ಆಚರಿಸಬೇಕು ಎಂದು ಶಿರಹಟ್ಟಿ ಪಿಎಸ್‌ಐ ಈರಪ್ಪ ರಿತ್ತಿ ಹೇಳಿದರು.

ಬುಧವಾರ ಶಿರಹಟ್ಟಿ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಿದ್ದ ಶಾಂತಿಸಭೆಯಲ್ಲಿ ಮಾತನಾಡಿದ ಅವರು, ಸಾರ್ವಜನಿಕ ಹಿತದೃಷ್ಟಿಯಿಂದ ಜಿಲ್ಲಾಧಿಕಾರಿಗಳು ಈಗಾಗಲೇ ಡಿಜೆ ವ್ಯವಸ್ಥೆ ಹಾಗೂ ಹೆಚ್ಚಿನ ಡೆಸಿಬೆಲ್ ಶಬ್ದವರ್ಧಕ ಸಾಧನಗಳ ಬಳಕೆಯನ್ನು ನಿಷೇಧಿಸಿದ್ದಾರೆ. ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಪಿಒಪಿ ಗಣೇಶ ಮೂರ್ತಿಗಳ ಬಳಕೆಯನ್ನೂ ನಿಷೇಧಿಸಲಾಗಿದ್ದು, ಗಣೇಶೋತ್ಸವ ಮಂಡಳಿಗಳು ಕಡ್ಡಾಯವಾಗಿ ಮಣ್ಣಿನಿಂದ ತಯಾರಿಸಿದ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಬೇಕು ಎಂದು ತಿಳಿಸಿದರು.

ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಲು ಸಂಬಂಧಿಸಿದ ಇಲಾಖೆಗಳ ಪೂರ್ವಾನುಮತಿ ಪಡೆಯಬೇಕು. ಸಂಘಟಕರು ಕಾವಲು ಸಮಿತಿ ರಚಿಸಿ ಸ್ವಯಂಸೇವಕರನ್ನು ನಿಯೋಜಿಸಬೇಕು. ಅವರಿಗೆ ಮಂಡಳಿಯ ಹೆಸರು ಇರುವ ಬ್ಯಾಡ್ಜ್, ಕೂಪನ್ ಹಾಗೂ ಗುರುತಿನ ಚೀಟಿ ವ್ಯವಸ್ಥೆ ಕಲ್ಪಿಸಬೇಕು ಎಂದು ಸೂಚಿಸಿದರು.

ಪ್ರತಿಷ್ಠಾಪನಾ ಸ್ಥಳದಲ್ಲಿ ಮದ್ಯಪಾನ, ಧೂಮಪಾನ, ಜೂಜಾಟ, ಇಸ್ಪೀಟ್ ಸೇರಿದಂತೆ ಯಾವುದೇ ಕಾನೂನುಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. ಕೋಮು ಪ್ರಚೋದನೆಗೆ ಕಾರಣವಾಗುವಂತಹ ಕೃತ್ಯಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕು.

> ಗಣೇಶೋತ್ಸವವನ್ನು ಪರಿಸರ ಸ್ನೇಹಿಯಾಗಿ ಹಾಗೂ ಶಾಂತಿಯುತವಾಗಿ ಆಚರಿಸುವುದು ಎಲ್ಲರ ಜವಾಬ್ದಾರಿ. ಡಿಜೆ, ಪಿಒಪಿ ಮೂರ್ತಿಗಳ ಬಳಕೆ ಹಾಗೂ ಕಾನೂನುಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡದೆ ಪೊಲೀಸ್ ಇಲಾಖೆ ಸೂಚಿಸುವ ಎಲ್ಲ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
>
> – ಈರಪ್ಪ ರಿತ್ತಿ, ಪಿಎಸ್‌ಐ, ಶಿರಹಟ್ಟಿ

ಕಡ್ಡಾಯವಾಗಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ಮುಂಜಾಗ್ರತಾ ಕ್ರಮವಾಗಿ ಬೆಂಕಿ ನಂದಿಸುವ ಉಪಕರಣಗಳನ್ನು ಸ್ಥಳದಲ್ಲಿ ಇರಿಸಿಕೊಳ್ಳಬೇಕು ಎಂದರು.

ಪೊಲೀಸ್ ಇಲಾಖೆ ಹೊರಡಿಸುವ ಎಲ್ಲ ನಿಯಮಗಳನ್ನು ಚಾಚೂ ತಪ್ಪದೆ ಪಾಲಿಸಿ ಶಾಂತಿಯುತವಾಗಿ ಹಬ್ಬ ಆಚರಿಸುವ ಮೂಲಕ ಇಲಾಖೆಗೆ ಸಹಕಾರ ನೀಡಬೇಕು ಎಂದು ಪಿಎಸ್‌ಐ ಈರಪ್ಪ ರಿತ್ತಿ ಹೇಳಿದರು.

ಸಭೆಯಲ್ಲಿ ತಹಶೀಲ್ದಾರ್ ಕೆ. ರಾಘವೇಂದ್ರ ರಾವ್, ಪಪಂ ಮುಖ್ಯಾಧಿಕಾರಿ ನಿಲೇಶ ಹಾದಿಮನಿ, ತಾಪಂ ಯೋಜನಾಧಿಕಾರಿ ಎಚ್.ಎನ್. ಕೊಂಡಿಕೊಪ್ಪ, ಹುಮಾಯೂನ್ ಮಾಗಡಿ, ಪರಮೇಶ ಪರಬ, ಸಂದೀಪ ಕಪ್ಪತ್ತನವರ, ಚಾಂದಸಾಬ ಮುಳಗುಂದ, ಅಜ್ಜುಗೌಡ ಪಾಟೀಲ, ಸುಧೀರ ಜಮಖಂಡಿ, ಜಕಾವುಲ್ಲಾ ಮಾಗಡಿ, ಅಲ್ಲಾಭಕ್ಷಿ ನಗಾರಿ, ಈರಣ್ಣ ಕೋಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಶಾಂತಿ-ಸೌಹಾರ್ದತೆಯಿಂದ ಹಬ್ಬ ಆಚರಣೆಗೆ ಪೊಲೀಸ್ ಇಲಾಖೆ ಸೂಚನೆ

# ಗಣೇಶ ವಿಸರ್ಜನೆ ವೇಳೆ ಡಿಜೆ ಸೌಂಡ್‌ಗೆ ಬ್ರೇಕ್




ವಿಜಯಸಾಕ್ಷಿ ಸುದ್ದಿ

**ಮುಳಗುಂದ:** ಗಣೇಶ ಹಬ್ಬವನ್ನು ಶಾಂತಿ ಹಾಗೂ ಸೌಹಾರ್ದತೆಯಿಂದ ಆಚರಿಸಬೇಕು. ಗಣೇಶ ವಿಸರ್ಜನೆ ಸೇರಿದಂತೆ ಹಬ್ಬದ ಸಂದರ್ಭದಲ್ಲಿ ಧ್ವನಿ ವರ್ಧಕ ಹಾಗೂ ಡಿಜೆ ಸೌಂಡ್ ಬಳಕೆಯನ್ನು ಕಾನೂ ನಿನಡಿ ನಿಷೇಧಿಸಲಾಗಿದ್ದು, ಸಾರ್ವಜನಿಕರು ಸಹಕರಿಸಬೇಕು ಎಂದು ಗದಗ ಡಿವೈಎಸ್‌ಪಿ ಮುರ್ತುಜಾ ಖಾದ್ರಿ ಹೇಳಿದರು.

ಮುಳಗುಂದ ಪೊಲೀಸ್ ಠಾಣೆಯಲ್ಲಿ ನಡೆದ ಗಣೇಶ ಹಬ್ಬದ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು, ಭಾರತೀಯ ಸಂಸ್ಕೃತಿಯಲ್ಲಿ ಹಬ್ಬ–ಹರಿದಿ ನಗಳನ್ನು ಶಾಂತಿ, ಸೌಹಾರ್ದತೆಯಿಂದ ಆಚರಿಸುವ ಪರಂಪರೆ ಇದೆ. ನಿಷೇಧದ ನಡುವೆಯೂ ಡಿಜೆ ಸೌಂಡ್ ಬಳಸಿದರೆ ಕಾನೂನು ಕ್ರಮ ಕೈಗೊಳ್ಳಲಾಗು ವುದು ಎಂದು ಎಚ್ಚರಿಸಿದರು.

ಪೊಲೀಸ್ ಇನ್ಸ್‌ಪೆಕ್ಟರ್ ಬಿ.ಜಿ. ಸುಬ್ಬಾಪುರಮಠ ಮಾತನಾಡಿ, ಗಣೇಶ ಪ್ರತಿಷ್ಠಾಪನೆಗೆ ಸಂಬಂಧಿಸಿದಂತೆ ಪಪಂ, ವಿದ್ಯುತ್ ಪ್ರಸರಣಾ ಇಲಾಖೆ ಹಾಗೂ ಪೊಲೀಸ್ ಇಲಾಖೆಯಿಂದ ಅಗತ್ಯ ಪರವಾನಗಿ ಪಡೆಯಬೇಕು.

ಪ್ರತಿಷ್ಠಾಪನಾ ಸ್ಥಳದಲ್ಲಿ ಸಿಸಿ ಕ್ಯಾಮೆರಾ ಅಳವಡಿಸುವುದು ಕಡ್ಡಾಯವಾಗಿದ್ದು, ಸಂಘದವರು ಸ್ವಯಂಸೇವಕರನ್ನು ನೇಮಿಸಿ ಸುರಕ್ಷತೆಗೆ ಆದ್ಯತೆ ನೀಡಬೇಕು.

ಪಪಂ ನಿಗದಿಪಡಿಸಿದ ಸ್ಥಳದಲ್ಲಿಯೇ ಗಣೇಶ ವಿಸರ್ಜನೆ ಮಾಡಬೇಕು ಎಂದರು.

ಸಭೆಯಲ್ಲಿ ಪಿಎಸ್‌ಐ ಡಿ.ಎಂ. ಮುಲ್ಲಾ, ಪ್ರಕಾಶ ಕಣವಿ, ಅಶೋಕ ಹುಣಸಿಮರದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮೊಬೈಲ್-ದೂರದರ್ಶನದ ಮೋಹ ಬಿಟ್ಟು ಜ್ಞಾನದ ಬೆಳಕಿನತ್ತ ಹೆಜ್ಜೆ ಇಡಿ

# ರಾಧಾಕೃಷ್ಣನ್‌ರ ಮೌಲ್ಯಗಳೇ ಬದುಕಿಗೆ ದಾರಿದೀಪ



ವಿಜಯಸಾಕ್ಷಿ ಸುದ್ದಿ

**ನರೇಗಲ್ಲ:** ಒಂದು ಕಾಲದಲ್ಲಿ ಗುರುಗಳ ಮಾತೇ ವಿದ್ಯಾರ್ಥಿಗಳಿಗೆ ದಾರಿದೀಪವಾಗಿತ್ತು. ಗುರು ತೋರಿದ ದಾರಿಯಲ್ಲಿ ನಡೆದು ಬದುಕು ಕಟ್ಟಿಕೊಳ್ಳುತ್ತಿದ್ದ ಶಿಷ್ಯರಿದ್ದರು. ಆದರೆ ಇಂದಿನ ತಂತ್ರಜ್ಞಾನ ಯುಗದಲ್ಲಿ ಮೊಬೈಲ್ ಹಾಗೂ ದೂರದರ್ಶನದ ಮೋಹ ವಿದ್ಯಾರ್ಥಿಗಳ ಅಮೂಲ್ಯ ಸಮಯವನ್ನು ಕಸಿದುಕೊಳ್ಳುತ್ತಿದೆ. ಹೀಗಾಗಿ ವಿದ್ಯಾರ್ಥಿಗಳು ಆಕರ್ಷಣೆಯ ಜಗತ್ತಿನಿಂದ ದೂರವಿದ್ದು, ಪುಸ್ತಕ ಹಾಗೂ ವಿದ್ಯಾಭ್ಯಾಸದತ್ತ ಮನಸ್ಸು ಕೇಂದ್ರೀಕರಿಸಬೇಕು ಎಂದು ನಿವೃತ್ತ ಶಿಕ್ಷಕ ಬಸನಗೌಡ ಮಲ್ಲನಗೌಡ್ರ ಕರೆ ನೀಡಿದರು. ಪಟ್ಟಣದ ಕೆಎಸ್‌ಎಸ್ ಪ್ರೌಢಶಾಲೆ ಹಾಗೂ ಕೆಎಸ್‌ಎಸ್ ಸಂಯುಕ್ತ ಪದವಿ ಪೂರ್ವ ವಿದ್ಯಾಲಯದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಸಸಿಗೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಗುರು ಎಂಬುದು ಕೇವಲ ಒಂದು ಹುದ್ದೆಯಲ್ಲ, ಅದು ಬದುಕನ್ನು ರೂಪಿಸುವ ಶಕ್ತಿ ಎಂದ ಅವರು, ವಿದ್ಯಾರ್ಥಿ ಜೀವನದಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಗುರು–ಶಿಷ್ಯರ ಸಂಬಂಧ ತಾಯಿ–ಮಗುವಿನ ಬಾಂಧವ್ಯದಷ್ಟೇ ಆತ್ಮೀಯವಾಗಿರಬೇಕು. ಶಿಕ್ಷಕರು ಪಠ್ಯಪುಸ್ತಕದ ಜ್ಞಾನ ನೀಡುವುದರ ಜೊತೆಗೆ ವಿದ್ಯಾರ್ಥಿಗಳಲ್ಲಿ ಮಾನವೀಯತೆ, ಶಿಸ್ತು, ಸಂಸ್ಕಾರ ಹಾಗೂ ಉತ್ತಮ ಚಿಂತನೆಗಳನ್ನು ಬೆಳೆಸಬೇಕು ಎಂದರು.

ಇಂದಿನ ಮಕ್ಕಳು ಮೊಬೈಲ್, ದೂರದರ್ಶನ ಹಾಗೂ ವಿವಿಧ ಆಕರ್ಷಣೆಗಳಿಗೆ ಒಳಗಾಗುತ್ತಿರುವುದು ಆತಂಕದ ಸಂಗತಿ. ದುಶ್ಚಟಗಳಿಂದ ದೂರವಿದ್ದು, ಸಮಯದ ಮೌಲ್ಯ ಅರಿತು ವಿದ್ಯಾಭ್ಯಾಸಕ್ಕೆ ಆದ್ಯತೆ ನೀಡಬೇಕು. ಇಂದು ಪುಸ್ತಕ ಹಿಡಿದ ಕೈಯೇ ನಾಳೆ ಸಮಾಜವನ್ನು ಮುನ್ನಡೆಸುವ ಕೈಯಾಗಬೇಕು. ಶಿಕ್ಷಕರ ಮಾರ್ಗದರ್ಶನವನ್ನು ಗೌರವದಿಂದ ಸ್ವೀಕರಿಸಿ, ಅವರ ಮಾತುಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ವಿದ್ಯಾರ್ಥಿಗಳ ಬದುಕಿಗೆ ನಿಜವಾದ ಅರ್ಥ ದೊರೆಯುತ್ತದೆ ಎಂದು ಹೇಳಿದರು.

ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ಶಿಕ್ಷಕ ವೃತ್ತಿಯ ಘನತೆಯನ್ನು ವಿಶ್ವದ ಮಟ್ಟಿಗೆ ಎತ್ತಿಹಿಡಿದ ಮಹಾನ್ ಚಿಂತಕರಾಗಿದ್ದರು. ತತ್ವಶಾಸ್ತ್ರದಲ್ಲಿ ಅಪಾರ ಪಾಂಡಿತ್ಯ ಹೊಂದಿದ್ದ ಅವರು, ತಮ್ಮ ಬದುಕಿನ ಮೂಲಕವೇ ಶಿಕ್ಷಕರು ಹೇಗಿರಬೇಕು ಹಾಗೂ ವಿದ್ಯಾರ್ಥಿಗಳು ಯಾವ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂಬುದನ್ನು ತೋರಿಸಿಕೊಟ್ಟರು. ಅವರ ಆದರ್ಶಗಳು ಇಂದಿಗೂ ಶಿಕ್ಷಕರಿಗೂ ವಿದ್ಯಾರ್ಥಿಗಳಿಗೂ ದಾರಿತೋರಿಸುವ ಬೆಳಕಿನ ಕಿರಣಗಳಾಗಿವೆ ಎಂದರು.

> ಗುರು ಎಂಬುದು ಕೇವಲ ಒಂದು ಹುದ್ದೆಯಲ್ಲ; ಅದು ಬದುಕನ್ನು ರೂಪಿಸುವ ಶಕ್ತಿ. ಶಿಕ್ಷಕರು ಪಠ್ಯಪುಸ್ತಕದ ಜ್ಞಾನ ನೀಡುವುದರ ಜತೆಗೆ ವಿದ್ಯಾರ್ಥಿಗಳಲ್ಲಿ ಮಾನವೀಯತೆ, ಶಿಸ್ತು, ಸಂಸ್ಕಾರ ಹಾಗೂ ಉತ್ತಮ ಚಿಂತನೆಗಳನ್ನು ಬೆಳೆಸಬೇಕು.
>
> – ಬಸನಗೌಡ ಮಲ್ಲನಗೌಡ್ರ, ನಿವೃತ್ತ ಶಿಕ್ಷಕ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಶಿವಾನಂದ ಗೋಗೇರಿ ಮಾತನಾಡಿ, ಮಕ್ಕಳ ಭೌತಿಕ ಬೆಳವಣಿಗೆಯಷ್ಟೇ ಅವರ ಮಾನಸಿಕ ಹಾಗೂ ನೈತಿಕ ಬೆಳವಣಿಗೆಯೂ ಮುಖ್ಯವಾಗಿದೆ. ಶಿಕ್ಷಣವೆಂದರೆ ಕೇವಲ ಅಂಕ ಗಳಿಸುವ ಸಾಧನವಲ್ಲ, ಅದು ಒಬ್ಬ ಉತ್ತಮ ಮನುಷ್ಯನನ್ನು ರೂಪಿಸುವ ಪ್ರಕ್ರಿಯೆ. ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ತತ್ವಶಾಸ್ತ್ರ ಅಡಿಗಲ್ಲಿನಂತಿದ್ದು, ಅದರ ಮಹತ್ವವನ್ನು ಸಮಾಜಕ್ಕೆ ತಿಳಿಸಿಕೊಟ್ಟ ಮಹಾನ್ ಚಿಂತಕರಲ್ಲಿ ರಾಧಾಕೃಷ್ಣನ್ ಅವರು ಪ್ರಮುಖರು ಎಂದರು.

ಶಿಕ್ಷಕರು ವಿದ್ಯಾರ್ಥಿಗಳ ಬದುಕಿನ ಕತ್ತಲೆಗೆ ಬೆಳಕು ತೋರುವ ದೀಪಗಳಿದ್ದಂತೆ. ಅವರು ನೀಡುವ ಜ್ಞಾನ, ಸಂಸ್ಕಾರ ಹಾಗೂ ಮಾರ್ಗದರ್ಶನ ಜೀವನದುದ್ದಕ್ಕೂ ಶಿಷ್ಯನೊಂದಿಗೆ ಸಾಗುತ್ತದೆ. ವಿದ್ಯಾರ್ಥಿಗಳು ಶಿಕ್ಷಕರಿಂದ ಪಡೆದ ಜ್ಞಾನವನ್ನು ಪರೀಕ್ಷೆಯ ಅಂಕಗಳಿಗೆ ಮಾತ್ರ ಸೀಮಿತಗೊಳಿಸದೆ, ಬದುಕಿನ ಪ್ರತಿಯೊಂದು ಹೆಜ್ಜೆಯಲ್ಲೂ ಅಳವಡಿಸಿಕೊಂಡಾಗ ಶಿಕ್ಷಣದ ನಿಜವಾದ ಉದ್ದೇಶ ಸಾರ್ಥಕವಾಗುತ್ತದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಪಿ.ಎನ್. ಹಿರೇಮಠ, ಎಂ.ವಿ. ವೆಂಕಟಾಪುರ, ಆರ್.ಟಿ. ಅಕ್ಕಸಾಲಿ, ಪಿ.ಬಿ. ಉಪ್ಪಿನ, ಎಸ್.ಎಂ. ಉಣಕಲ್, ಭೋವಿ ಸಮಾಜದ ಅಧ್ಯಕ್ಷ ಮಣ್ಣೂವಡ್ಡರ, ಎ.ಎಂ. ಹುಡೆದ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿ–ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಈಶ್ವರೀಯ ವಿವಿಯಲ್ಲಿ ರಕ್ಷಾಬಂಧನ



ವಿಜಯಸಾಕ್ಷಿ ಸುದ್ದಿ

**ನರೇಗಲ್ಲ:** ನರೇಗಲ್ ಪಟ್ಟಣದ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ರಕ್ಷಾಬಂಧನ ಹಾಗೂ ಶಿಕ್ಷಕರ ದಿನಾಚರಣೆಯನ್ನು ಜಂಟಿಯಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ ಅಕ್ಕನವರು, ರಕ್ಷಾಬಂಧನವು ಸಹೋದರತ್ವದ ಭಾವನೆಯನ್ನು ಪ್ರತಿಬಿಂಬಿಸುವ ಪವಿತ್ರ ಹಬ್ಬವಾಗಿದ್ದು, ಎಲ್ಲರಲ್ಲೂ ವಿಶ್ವ ಭ್ರಾತೃತ್ವದ ಭಾವನೆ ಮೂಡಿಸಬೇಕು ಎಂದರು. ಸಂಸ್ಥೆಯ ಮುಖ್ಯ ಕೇಂದ್ರವಾದ ಅಬು ಪರ್ವತದಿಂದ ತರಲಾದ ಪವಿತ್ರ ರಾಖಿಯನ್ನು ಸಭೆಯಲ್ಲಿ ದರ್ಶನ ಮಾಡಿಸಿ, ರಕ್ಷಾಬಂಧನದ ಮಹತ್ವವನ್ನು ವಿವರಿಸಿದರು. ನಾವೆಲ್ಲರೂ ಒಬ್ಬನೇ ಪರಮಾತ್ಮನ ಮಕ್ಕಳು. ಮನುಷ್ಯ ದೇಹದಲ್ಲಿರುವ ಆತ್ಮರೇ ಮನುಷ್ಯರು. ಆತ್ಮಕ್ಕೆ ಪರಮಾತ್ಮನೇ ತಂದೆ–ತಾಯಿ ಎಂಬ ಆಧ್ಯಾತ್ಮಿಕ ಜ್ಞಾನವನ್ನು ಅರಿತುಕೊಂಡಾಗ ಎಲ್ಲರನ್ನೂ ಸಹೋದರ–ಸಹೋದರಿಯರಂತೆ ಕಾಣುವ ಭಾವನೆ ಬೆಳೆಯುತ್ತದೆ. ಇದರಿಂದ ಜಾತಿ, ಮತ, ಪಂಥ ಸೇರಿದಂತೆ ಎಲ್ಲ ಭೇದಗಳು ದೂರವಾಗಿ ವಿಶ್ವ ಭ್ರಾತೃತ್ವ ನಿರ್ಮಾಣವಾಗುತ್ತದೆ ಎಂದು ಹೇಳಿದರು.

ದೇಹದ ರಕ್ಷಣೆಗೆ ಹಲವು ಕ್ರಮಗಳನ್ನು ಕೈಗೊಳ್ಳುವಂತೆ ಆತ್ಮಜ್ಯೋತಿಯನ್ನು ದುಃಖ, ದುರ್ಗುಣ, ದುಸಂಗ, ದುಶ್ಚಟ ಹಾಗೂ ದುರ್ನಡತೆಯಿಂದ ರಕ್ಷಿಸಿಕೊಳ್ಳಬೇಕು. ಸದ್ವಿಚಾರ, ಸದ್ಗುಣ, ಸತ್ಸಂಗ, ಶ್ರೇಷ್ಠ ಕರ್ಮ ಹಾಗೂ ಸದ್ವ್ಯವಹಾರಗಳನ್ನು ಅಳವಡಿಸಿಕೊಳ್ಳುವುದೇ ನಿಜವಾದ ಸ್ವರಕ್ಷಣೆ ಎಂದು ತಿಳಿಸಿದರು.

ಶಿಕ್ಷಣದಿಂದಲೇ ವ್ಯಕ್ತಿ ಹಾಗೂ ಸಮಾಜದ ರಕ್ಷಣೆ ಸಾಧ್ಯ. ಮುಂದಿನ ಪೀಳಿಗೆಯನ್ನು ಮೌಲ್ಯಯುತವಾಗಿ ಬೆಳೆಸಿ, ಸದ್ಗುಣ, ಸಚ್ಚಾರಿತ್ರ್ಯ ಹಾಗೂ ಉತ್ತಮ ಸಂಸ್ಕಾರಗಳನ್ನು ನೀಡುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಶಿಕ್ಷಕರ ಕೈಯಲ್ಲಿ ದೇಶದ ಉತ್ತಮ ಪ್ರಜೆಗಳು ರೂಪುಗೊಳ್ಳುತ್ತಾರೆ. ಪರಮ ಶಿಕ್ಷಕ ಹಾಗೂ ಪರಮ ರಕ್ಷಕನಾದ ಪರಮಾತ್ಮನ ಆಶೀರ್ವಾದದ ವೇದಿಕೆಯಲ್ಲಿ ಶಿಕ್ಷಕರನ್ನು ಸನ್ಮಾನಿಸುವುದು ವಿಶೇಷವಾಗಿದೆ ಎಂದು ಜಯಂತಿ ಅಕ್ಕನವರು ಹೇಳಿದರು.

ಕಾರ್ಯಕ್ರಮದಲ್ಲಿ ಎಂ.ಕೆ. ಬೇವಿನಕಟ್ಟಿ, ಬಿ.ಬಿ. ಕುರಿ, ಎಂ.ಬಿ. ಸಜ್ಜನರ, ಜೆ.ಎ. ಪಾಟೀಲ, ಎಚ್.ವಿ. ಇಟಿ, ಆರ್.ವಿ. ತೊಂಡಿಹಾಳ, ಎಸ್.ಆರ್. ಹುಬ್ಬಳ್ಳಿ, ಜೆ.ವಿ. ಕೇರಿ, ಎಚ್.ಸಿ. ಶೈಲಾ, ಸುನಂದಾ ಮುಂಜಿ, ನೇತ್ರಾ ಅಪ್ಪಣ್ಣವರ, ದೇವಮ್ಮ ಪೂಜಾರಿ, ಶ್ರೀದೇವಿ ಚೌಡಿ, ಎ.ಎಸ್. ಅಣಗೌಡ್ರ, ವಿ.ಎಸ್. ದಿಂಡೂರ, ರವಿ ದೇವರೆಡ್ಡಿ, ಶ್ವೇತಾ ಕೊಟಗಿ, ಕೆ.ಎಸ್. ಅಣಗೌಡ್ರ, ಬಸವಣ್ಣಪ್ಪ ಬಳಿಗೇರ ಹಾಗೂ ಬಿ.ಜಿ. ಶಿರ್ಸಿ ಸೇರಿದಂತೆ ಶಿಕ್ಷಕರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಶ್ವೇತಾ ಕೊಟಗಿ ಹಾಗೂ ರವಿ ದೇವರೆಡ್ಡಿ ತಮ್ಮ ಅನಿಸಿಕೆ ಹಂಚಿಕೊಂಡರು. ಸಂಚಾಲಕಿ ಸವಿತಕ್ಕ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಸಣ್ಣ ಸುದ್ದಿಗಳು

## ಜಿಲ್ಲಾ ಉತ್ತಮ ಶಿಕ್ಷಕಿ ಭಾರತಿ ಕುಲಕರ್ಣಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ**

**ಗದಗ:** ಗದಗ ಜಿಲ್ಲಾ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಭಾಜನರಾಗಿರುವ ಗದುಗಿನ ಸರ್ಕಾರಿ ಮಾದರಿ ಶಾಲೆ ನಂ. 11ರ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಭಾರತಿ ಕುಲಕರ್ಣಿ ಅವರನ್ನು ಕಾರ್ಮಿಕ ಕಲ್ಯಾಣ ಸಂಸ್ಥೆ ಸನ್ಮಾನಿಸಿ ಗೌರವಿಸಿತು.

ಕಾರ್ಯಕ್ರಮದಲ್ಲಿ ಕಾರ್ಮಿಕ ಕಲ್ಯಾಣ ಸಂಸ್ಥೆಯ ಗೌರವಾಧ್ಯಕ್ಷ ಝೆಡ್.ಡಿ. ಬೇಲೇರಿ, ಕಾರ್ಯಾಧ್ಯಕ್ಷ ನಾಸಿರ್ ಚಿಕ್ಕೇನಕೊಪ್ಪ, ಅಧ್ಯಕ್ಷ ಇರ್ಫಾನ್ ಡಂಬಳ, ಹಿರಿಯ ನಿರ್ದೇಶಕ ಭೀಮಪ್ಪ ಪೂಜಾರ್, ಎಸ್‌ಡಿಎಂಸಿ ಅಧ್ಯಕ್ಷ ಕರಮುಡಿ ನಿಂಗಪ್ಪ ಕಟ್ಟಿಮನಿ, ನಾಸಿರ್ ನರೇಗಲ್, ಖಾಜಾಸಾಬ ಗಬ್ಬೂರ, ಮುನೀರ್, ಬಿಆರ್‌ಪಿ ಹೂಗಾರ, ಶಾಲೆಯ ಶಿಕ್ಷಕಿಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನೇಕಾರರ ಮಕ್ಕಳ ಪ್ರತಿಭೆಗಳಿಂದ ಅರ್ಜಿ ಆಹ್ವಾನ


**ವಿಜಯಸಾಕ್ಷಿ ಸುದ್ದಿ**

**ಗದಗ:** ಗದಗ–ಬೆಟಗೇರಿ ನೇಕಾರರ ಪತ್ತಿನ ಸಹಕಾರ ಸಂಘದ ಸದಸ್ಯರ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲು ಅರ್ಜಿ ಆಹ್ವಾನಿಸಲಾಗಿದೆ. 2025–26ನೇ ಸಾಲಿನಲ್ಲಿ ಎಸ್–ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದು ಉತ್ತೀರ್ಣರಾದ ನೇಕಾರರ ಪತ್ತಿನ ಸಹಕಾರ ಸಂಘದ ಸದಸ್ಯರ ಮಕ್ಕಳು ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು ಸಂಘದ ಕಾರ್ಯಾಲಯದಲ್ಲಿ ಪಡೆದು ಭರ್ತಿ ಮಾಡಿ, ಅಂಕಪಟ್ಟಿಯ ಜೆರಾಕ್ಸ್ ಪ್ರತಿಯೊಂದಿಗೆ ಸೆ. 15ರೊಳಗೆ ಸಂಘದ ಕಾರ್ಯಾಲಯಕ್ಕೆ ಸಲ್ಲಿಸಬೇಕು. ಅತಿ ಹೆಚ್ಚು ಅಂಕ ಪಡೆದ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಸಂಘದ ವಾರ್ಷಿಕ ಸರ್ವಸಾಧಾರಣ ಸಭೆಯಲ್ಲಿ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ತಿಳಿಸಿದ್ದಾರೆ.

## ಕೊಪ್ಪಳ ರೈಲು ನಿಲ್ದಾಣದ ಬಳಿ ಅಪರಿಚಿತ ವ್ಯಕ್ತಿಯ ಶವ ಪತ್ತೆ

**ವಿಜಯಸಾಕ್ಷಿ ಸುದ್ದಿ**

**ಗದಗ:** ಗದಗ ರೈಲ್ವೆ ಪೊಲೀಸ್ ಠಾಣೆ ವ್ಯಾಪ್ತಿಯ ಕೊಪ್ಪಳ ರೈಲು ನಿಲ್ದಾಣದ ಸಮೀಪ ಸೆ. 4ರಂದು ಅಪರಿಚಿತ ವ್ಯಕ್ತಿಯೊಬ್ಬರು ಚಲಿಸುತ್ತಿದ್ದ ರೈಲಿಗೆ ಸಿಲುಕಿ ಮೃತಪಟ್ಟಿದ್ದಾರೆ.



ಮೃತ ವ್ಯಕ್ತಿಗೆ ಸುಮಾರು 40ರಿಂದ 45 ವರ್ಷ ವಯಸ್ಸಾಗಿದ್ದು, ಈ ಕುರಿತು ಗದಗ ರೈಲ್ವೆ ಪೊಲೀಸ್ ಠಾಣೆಯಲ್ಲಿ ಯುಡಿಆರ್ ಸಂಖ್ಯೆ 39/2026, ಕಲಂ 194 ಸಿಆರ್‌ಪಿಸಿ (ಪ್ರಸ್ತುತ ಅನ್ವಯಿಸುವ ಕಾನೂನು ಪ್ರಕಾರ) ಅಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ. ಮೃತ ವ್ಯಕ್ತಿ ಅಪರಿಚಿತನಾಗಿರುವುದ–ರಿಂದ ವಾರಸುದಾರರ ಪತ್ತೆಗಾಗಿ ರೈಲ್ವೆ ಪೊಲೀಸರು ಚಹರೆ ಹಾಗೂ ಬಟ್ಟೆಬರೆಗಳ ವಿವರಗಳನ್ನು ಪ್ರಕಟಿಸಿದ್ದಾರೆ. ಮೃತನ ಮುಖ ದುಂಡಾಗಿದ್ದು, ಹಗಲವಾದ ಹಣೆ, ಉದ್ದನೆಯ ಮೂಗು, ಸಾಧಾರಣ ಗೋಧಿ ಮೈಬಣ್ಣ ಹಾಗೂ ಸದೃಢ ಮೈಕಟ್ಟು ಹೊಂದಿದ್ದಾನೆ. ಸುಮಾರು 5.5 ಅಡಿ ಎತ್ತರವಿದ್ದು, ತಲೆಯಲ್ಲಿ 2–3 ಇಂಚು ಉದ್ದದ ಕಪ್ಪು ಕೂದಲು, ಸುಮಾರು 1–1.5 ಇಂಚು ಉದ್ದದ ಕಪ್ಪು ದಾಡಿ ಹಾಗೂ ಮೀಸೆ ಇದೆ. ಮೃತನ ಮೈಮೇಲೆ ಕಂದು ಬಣ್ಣದ ಗೆರೆಗಳಿರುವ ಆಫ್ ಟಿ–ಶರ್ಟ್, ಬಿಳಿ ಲುಂಗಿ ಹಾಗೂ ಕೆಂಪು ಬಣ್ಣದ ಅಂಡರ್‌ವೇರ್ ಇತ್ತು. ವಿಶೇಷ ಗುರುತುಗಳು: ಎಡಗೈ ಮುಂಗೈ ಮೇಲೆ 'ಮಾಳಾ' ಎಂಬ ಹಚ್ಚೆ ಇದ್ದು, ಬಲಗೈ ಮುಂಗೈ ಮೇಲೆ 'ಅಮ್ಮ' ಎಂಬ ಹಚ್ಚೆ ಇದೆ. ಬಲಗೈ ರಟ್ಟೆಯ ಮೇಲೆ ಕನಕದಾಸರ ಚಿತ್ರವನ್ನು ಹಚ್ಚೆ ಹಾಕಿಸಿಕೊಂಡಿದ್ದಾನೆ.

ಮೃತ ವ್ಯಕ್ತಿಯ ಕುರಿತು ಯಾವುದೇ ಮಾಹಿತಿ ದೊರೆತಲ್ಲಿ ಅಥವಾ ಚಹರೆಗೆ ಹೊಂದಿಕೆಯಾಗುವ ವ್ಯಕ್ತಿ ಕಾಣೆಯಾಗಿರುವ ಬಗ್ಗೆ ಮಾಹಿತಿ ಇದ್ದಲ್ಲಿ ಗದಗ ರೈಲ್ವೆ ಪೊಲೀಸ್ ಠಾಣೆಯನ್ನು ಸಂಪರ್ಕಿಸುವಂತೆ ಕೋರಲಾಗಿದೆ. ಗದಗ ರೈಲ್ವೆ ಪೊಲೀಸ್ ಠಾಣೆ: 08372–278744, ಮೊಬೈಲ್: 9480802128. ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080–22871291. ಇ–ಮೇಲ್ ಮೂಲಕವೂ ಮಾಹಿತಿ ನೀಡಬಹುದು ಎಂದು ರೈಲ್ವೆ ಪೊಲೀಸ್ ಠಾಣೆಯ ಸಬ್ ಇನ್‌ಸ್ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ. 21ರಂದು ಹಿರಿಯ ನಾಗರಿಕರಿಗೆ ಕ್ರೀಡಾ–ಸಾಂಸ್ಕೃತಿಕ ಸ್ಪರ್ಧೆ

**ವಿಜಯಸಾಕ್ಷಿ ಸುದ್ದಿ**

**ಗದಗ:** ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಸೆ.21ರಂದು ಬೆಳಗ್ಗೆ 9ಕ್ಕೆ ಗದಗದ ಶ್ರೀ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಜಿಲ್ಲಾ ಮಟ್ಟದ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. 60–69, 70–79 ಹಾಗೂ 80 ವರ್ಷ ಮೇಲ್ಪಟ್ಟ ಮಹಿಳೆಯರು ಮತ್ತು ಪುರುಷರಿಗೆ ಪ್ರತ್ಯೇಕ ವಿಭಾಗಗಳಿರಲಿವೆ. ಬಿರುಸಿನ ನಡಿಗೆ, ಬಕೆಟ್‌ಗೆ ಬಾಲ್ ಎಸೆಯುವುದು, ಮ್ಯೂಸಿಕಲ್ ಚೇರ್, ಚೆಸ್ ಹಾಗೂ ಕೇರಂ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ. ಏಕಪಾತ್ರಾಭಿನಯ ಮತ್ತು ಗಾಯನ ಸಾಂಸ್ಕೃತಿಕ ಸ್ಪರ್ಧೆಗಳನ್ನೂ ಏರ್ಪಡಿಸಲಾಗಿದೆ. ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸುವವರು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಹಾಗೂ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸುವವರು ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸುವಂತಿಲ್ಲ. ಭಾಗವಹಿಸುವವರು ಹಿರಿಯ ನಾಗರಿಕರ ಗುರುತಿನ ಚೀಟಿ ಅಥವಾ ಆಧಾರ್ ಕಾರ್ಡ್, ಒಂದು ಫೋಟೊ ಹಾಗೂ ದಾಖಲೆಗಳ ಜೆರಾಕ್ಸ್ ಪ್ರತಿಗಳೊಂದಿಗೆ ಸಂಬಂಧಿಸಿದ ಸಹಾಯವಾಣಿ, ವೃದ್ಧಾಶ್ರಮ, ಎಂಆರ್‌ಡಬ್ಲ್ಯು ಕೇಂದ್ರಗಳು ಅಥವಾ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದಲ್ಲಿ ಸೆ.18ರ ಸಂಜೆ 5ರೊಳಗೆ ಹೆಸರು ನೋಂದಾಯಿಸಬೇಕು.

### KSMCA ಒಡಂಬಡಿಕೆ; ಕಲಾವಿದರು, ಕಂಟೆಂಟ್ ರಚನೆಕಾರರಿಗೆ ಜಾಗತಿಕ ಅವಕಾಶ

# ಭಾರತ–ದಕ್ಷಿಣ ಆಫ್ರಿಕಾ ಸೃಜನಶೀಲತೆಗೆ ಹೊಸ ಜೋಡಿ




### ಸೃಜನಶೀಲತೆಗೆ ಜಾಗತಿಕ ಮಾರುಕಟೆ

- ಸೃಜನಶೀಲ ಪ್ರತಿಭೆ ಹಾಗೂ ಆಲೋಚನೆಗಳಿಗೆ ಜಾಗತಿಕ ವೇದಿಕೆ
- ಭಾರತ-ದಕ್ಷಿಣ ಆಫ್ರಿಕಾ ನಡುವೆ ಪ್ರತಿಭೆ ಮತ್ತು ಜ್ಞಾನ ವಿನಿಮಯ
- ಸೃಜನಶೀಲ ಉದ್ಯಮಗಳಿಗೆ ಹೊಸ ಮಾರುಕಟ್ಟೆ ಅವಕಾಶ
- ಉದ್ಯಮ ಸಂಪರ್ಕ ಹಾಗೂ ಹೂಡಿಕೆ ಅವಕಾಶಗಳ ಅನ್ವೇಷಣೆ
- ಮಾಧ್ಯಮ, ಮನರಂಜನೆ ಮತ್ತು ಡಿಜಿಟಲ್ ಕಂಟೆಂಟ್‌ಗೆ ಉತ್ತೇಜನ
- ಸೃಜನಶೀಲ ಕ್ಷೇತ್ರದ ವಾಣಿಜ್ಯೀಕರಣ ಹಾಗೂ ಉದ್ಯಮ ಅಭಿವೃದ್ಧಿಗೆ ಒತ್ತು
- ಸ್ಥಳೀಯ ಪ್ರತಿಭೆ ಮತ್ತು ಉದ್ಯಮಗಳನ್ನು ಅಂತರರಾಷ್ಟ್ರೀಯ ಮಾರುಕಟ್ಟೆಗೆ ಸಂಪರ್ಕಿಸುವ ಪ್ರಯತ್ನ

**ವಿಜಯಸಾಕ್ಷಿ ಸುದ್ದಿ**

**ನವದೆಹಲಿ:** ಭಾರತ–ದಕ್ಷಿಣ ಆಫ್ರಿಕಾ ನಡುವಿನ ಸೃಜನಶೀಲ ಆರ್ಥಿಕ ಸಹಭಾಗಿ–ತ್ವವನ್ನು ಬಲಪಡಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಮಾರ್ಕೆಟಿಂಗ್ ಕಮ್ಯುನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ (KSMCA) ಮಹತ್ವದ ಹೆಜ್ಜೆ ಇಟ್ಟಿದೆ. ಪ್ರಧಾನಮಂತ್ರಿ ಸಂಗ್ರಹಾಲಯ, ತೀನ್ ಮೂರ್ತಿ ಭವನದಲ್ಲಿ ನಡೆದ ಸಭೆಯಲ್ಲಿ BRICS Women's Business Alliance-South Africa Chapter (BRICS WBA-SA) ಹಾಗೂ BRICS Chamber of Commerce and Industry (BRICS CCI) ಜತೆ ತ್ರಿಪಕ್ಷೀಯ Memorandum of Coordination (MoC)ಗೆ ಸಹಿ ಮಾಡಲಾಯಿತು.

KSMCAಯ ಅಧ್ಯಕ್ಷ ಹಾಗೂ ಕಾರವಾರ ಶಾಸಕ ಸತೀಶ್ ಕೃಷ್ಣ ಸೈಲ್ ಅವರ ಮಾರ್ಗದರ್ಶನದಲ್ಲಿ ನಡೆದ ಒಡಂಬಡಿಕೆಗೆ KSMCA ವ್ಯವಸ್ಥಾಪಕ ನಿರ್ದೇಶಕ ಬಿ. ಆನಂದ್, BRICS CCI ಅಧ್ಯಕ್ಷ ಸಮೀಪ್ ಶಾಸ್ತ್ರಿ ಹಾಗೂ BRICS Women's Business Alliance-South Africa ಕಾರ್ಯಕಾರಿ ಅಧ್ಯಕ್ಷೆ HRH ಪ್ರಿನ್ಸೆಸ್ ಲೆಬೊಗಾಂಗ್ ಜುಲು ಸಹಿ ಹಾಕಿದರು.

ಈ ಸಹಕಾರದ ಪ್ರಮುಖ ಉದ್ದೇಶ ಭಾರತ–ದಕ್ಷಿಣ ಆಫ್ರಿಕಾ BRICS Cre-ative Economy Partnership ಅನ್ನು ಬಲಪಡಿಸುವುದಾಗಿದ್ದು, 'Screen to Market™' ಅನ್ನು ಪ್ರಮುಖ ಅನುಷ್ಠಾನ ಕಾರ್ಯಕ್ರಮವಾಗಿ ಗುರುತಿಸಲಾಗಿದೆ. ಸೃಜನಶೀಲ ಆರ್ಥಿಕತೆ, ಮಾಧ್ಯಮ, ಮನರಂಜನೆ, ಡಿಜಿಟಲ್ ಕಂಟೆಂಟ್, ಉದ್ಯಮಶೀಲತೆ, ನವೋದ್ಯಮ, ವ್ಯಾಪಾರ ಹಾಗೂ ಅಂತರರಾಷ್ಟ್ರೀಯ ಮಾರುಕಟ್ಟೆ ಪ್ರವೇಶ ಕ್ಷೇತ್ರಗಳಲ್ಲಿ ಎರಡೂ ದೇಶಗಳ ನಡುವೆ ಸಹಕಾರ ವೃದ್ಧಿಸಲು ಒಡಂಬಡಿಕೆ ನೆರವಾಗಲಿದೆ.

ಸೃಜನಶೀಲ ವೃತ್ತಿಪರರು, ಉದ್ಯಮಿಗಳು ಹಾಗೂ ಸಂಸ್ಥೆಗಳಿಗೆ ಎರಡೂ ದೇಶಗಳ ಮಾರುಕಟ್ಟೆಗಳಲ್ಲಿ ಹೊಸ ಅವಕಾಶಗಳನ್ನು ಸೃಷ್ಟಿಸುವ ನಿಟ್ಟಿನಲ್ಲಿ ಗಡಿ ದಾಟಿ–ದ ಸಹಭಾಗಿತ್ವ, ಪ್ರತಿಭೆ ಹಾಗೂ ಜ್ಞಾನ ವಿನಿಮಯ, ಉದ್ಯಮ ಸಂಪರ್ಕ, ಮಾರುಕಟ್ಟೆ ಅಭಿವೃದ್ಧಿ ಮತ್ತು ಹೂಡಿಕೆ ಅವಕಾಶಗಳನ್ನು ಅನ್ವೇಷಿಸಲಾಗುವುದು.

'Screen to Market™' ಮೂಲಕ ಆಲೋಚನೆ, ಪ್ರತಿಭೆ ಮತ್ತು ಸೃಜನಶೀಲ ಉದ್ಯಮಗಳನ್ನು ಹೊಸ ಮಾರುಕಟ್ಟೆಗಳು ಹಾಗೂ ಜಾಗತಿಕ ಅವಕಾಶಗಳೊಂದಿಗೆ ಸಂಪರ್ಕಿಸುವ ವೇದಿಕೆ ರೂಪಿಸುವ ಉದ್ದೇಶ ಹೊಂದಲಾಗಿದೆ.

ಸೃಜನಶೀಲ ಕ್ಷೇತ್ರವನ್ನು ಕೇವಲ ವಿಷಯ ನಿರ್ಮಾಣಕ್ಕೆ ಸೀಮಿತಗೊಳಿಸದೆ, ವಾಣಿಜ್ಯೀ ಕರಣ, ಉದ್ಯಮ ಅಭಿವೃದ್ಧಿ ಹಾಗೂ ಅಂ ತ ರರಾಷ್ಟ್ರೀಯ ಮಾರುಕಟ್ಟೆ ಪ್ರವೇಶ ದತ್ತ ಕೊಂಡೊಯ್ಯುವುದು ಇದರ ಆಶಯ ವಾಗಿದೆ. ಕರ್ನಾಟಕ ಸರ್ಕಾರದ ಉದ್ಯಮವಾಗಿರುವ KSM-CA ತನ್ನ ಮಾರ್ಕೆಟಿಂಗ್ ಕಮ್ಯುನಿಕೇಷನ್, ಜಾಹೀರಾತು ಹಾಗೂ ತಂತ್ರಾತ್ಮಕ ಸಂಪರ್ಕ ಕ್ಷೇತ್ರದ ಪರಿಣತಿಯನ್ನು ಬಳಸಿಕೊಂಡು ಅಂತರರಾಷ್ಟ್ರೀಯ ಮಟ್ಟದಲ್ಲಿ ಹೊಸ ವೇದಿಕೆಗಳು ಮತ್ತು ಸಹಭಾಗಿತ್ವಗಳನ್ನು ರೂಪಿಸಲು ಮುಂದಾಗಿದೆ.

ಈ ತ್ರಿಪಕ್ಷೀಯ ಒಡಂಬಡಿಕೆಯು BRICS ವೇದಿಕೆಯ ಮೂಲಕ ಭಾರತ–ದಕ್ಷಿಣ ಆಫ್ರಿಕಾ ನಡುವಿನ ವ್ಯಾಪಾರಿಕ ಹಾಗೂ ಸಾಂಸ್ಕೃತಿಕ ಸಂಬಂಧಗಳಿಗೆ ಮತ್ತಷ್ಟು ಬಲ ನೀಡುವ ನಿರೀಕ್ಷೆ ಮೂಡಿಸಿದೆ.

## ಹಾಲಗೊಂಡ ಬಸವೇಶ್ವರ ಲಘು ರಥೋತ್ಸವ



**ವಿಜಯಸಾಕ್ಷಿ ಸುದ್ದಿ**

**ಲಕ್ಕುಂಡಿ:** ಇಲ್ಲಿಯ ಇತಿಹಾಸ ಪ್ರಸಿದ್ಧ ಹಾಲಗೊಂಡ ಬಸವೇಶ್ವರರ 201ನೇ ಜಾತ್ರೆಯ ಅಂಗವಾಗಿ ಲಘು ರಥೋತ್ಸವ ಶ್ರದ್ಧಾ–ಭಕ್ತಿಯಿಂದ ಜರುಗಿತು.

ಸರಕಾರಿ ದ್ವಿಭಾಷಾ ಪ್ರಾಥಮಿಕ ಮಕ್ಕಳ ಶಾಲೆಯಿಂದ ವಿರುಪಾಕ್ಷೇಶ್ವರ ದೇವಸ್ಥಾನದವರೆಗೆ ಲಘು ರಥೋತ್ಸವ ಸಾಗಿತು. ಮಾರ್ಗದುದ್ದಕ್ಕೂ ಭಕ್ತಾಧಿಗಳು ಉತ್ತತ್ತಿಯನ್ನು ಎಸೆದು ಬಸವೇಶ್ವರರಿಗೆ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ರಥೋತ್ಸವದಲ್ಲಿ ಭಾಗವಹಿಸಿದ್ದ ಡೊಳ್ಳು ಕುಣಿತ ಜನಮನ ಸೆಳೆಯಿತು.

ಇದಕ್ಕೂ ಪೂರ್ವ ವಿರುಪಾಕ್ಷೇಶ್ವರ ದೇವಸ್ಥಾನದಿಂದ ಹಾಲಗೊಂಡ ಬಸವೇಶ್ವರ ದೇಗುಲದವರೆಗೆ ಪಾಲಕಿ ಮೆರವಣಿಗೆ ನಡೆಸಿ, ನೈವೇದ್ಯ ಅರ್ಪಿಸಿ ಪೂಜೆ ಸಲ್ಲಿಸಲಾಯಿತು.

ಬಳಿಕ ಲಘು ತೇರಿಗೆ ಐದು ಸುತ್ತು ಪ್ರದಕ್ಷಿಣೆ ಹಾಕಿ, ವಿಧಿ–ವಿಧಾನಗಳೊಂದಿಗೆ ಪೂಜೆ ಸಲ್ಲಿಸಿದ ನಂತರ ರಥೋತ್ಸವಕ್ಕೆ ಚಾಲನೆ ನೀಡಲಾಯಿತು.

## ಬಣ್ಣದ ಕನಸುಗಳು ಚಿತ್ರಕ್ಕೆ ಡಬ್ಬಿಂಗ್ ಮುಕ್ತಾಯ



**ವಿಜಯಸಾಕ್ಷಿ ಸುದ್ದಿ**

**ಬೆಂಗಳೂರು:** ಮಹದೇಶ್ವರ ಎಂಟರ್‌ಪ್ರೈಸಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗಿರುವ 'ಬಣ್ಣದ ಕನಸುಗಳು' ಕನ್ನಡ ಚಲನಚಿತ್ರದ ಡಬ್ಬಿಂಗ್ ಕಾರ್ಯ ಪೂರ್ಣಗೊಂಡಿದೆ. ಚಿತ್ರದ ಟಾಕಿ ಪೋಷನ್, ಹಾಡುಗಳ ಚಿತ್ರೀಕರಣ, ಸಂಕಲನ ಹಾಗೂ ಡಬ್ಬಿಂಗ್ ಮುಕ್ತಾಯಗೊಂಡಿದ್ದು, ಸದ್ಯ ರಿರೆಕಾರ್ಡಿಂಗ್ ಕಾರ್ಯ ಮಾತ್ರ ಬಾಕಿಯಿದೆ. ಬಳಿಕ ಚಿತ್ರವನ್ನು ಸೆನ್ಸಾರ್ ಮಂಡಳಿಗೆ ಕಳುಹಿಸಲಾಗುವುದು ಎಂದು ನಿರ್ದೇಶಕ ಹಾಗೂ ನಿರ್ಮಾಪಕ ಓಂಪ್ರಕಾಶ್ ನಾಯಕ್ ತಿಳಿಸಿದ್ದಾರೆ.

ಚಿತ್ರದ ನಿರ್ದೇಶನದ ಜವಾಬ್ದಾರಿಯ ಜೊತೆಗೆ ಓಂಪ್ರಕಾಶ್ ನಾಯಕ್ ಅವರು ಕಥೆ, ಚಿತ್ರಕಥೆ, ಸಂಭಾಷಣೆ ಹಾಗೂ ಹಾಡುಗಳನ್ನು ರಚಿಸಿದ್ದಾರೆ. ಅಲ್ಲದೆ ಸಂಗೀತ ನಿರ್ದೇಶನ ಮತ್ತು ಸಂಕಲನದ ಹೊಣೆಯನ್ನೂ ಹೊತ್ತಿದ್ದಾರೆ. ಈ ಮೂಲಕ ಪ್ರಥಮ ಬಾರಿಗೆ ಸಂಗೀತ ನಿರ್ದೇಶಕರಾಗಿ ಗುರುತಿಸಿಕೊಂಡಿದ್ದಾರೆ. ಚಿತ್ರದಲ್ಲಿರುವ ಆರು ಹಾಡುಗಳು ಕೇಳುಗರನ್ನು ಸೆಳೆಯುವಂತಿವೆ ಎಂದು ಚಿತ್ರತಂಡ ತಿಳಿಸಿದೆ.

ಚಿತ್ರದಲ್ಲಿ 'ಗ್ಯಾಂಗ್ ಗ್ಯಾಂಗ್ ನಮ್ದೊಂದು ಪೋಲಿ ಗ್ಯಾಂಗ್' ಹಾಗೂ 'ದುಡ್ಡು ದುಡ್ಡು ಇಲ್ಲಿ ಎಲ್ಲಾ ದುಡ್ಡು' ಎಂಬ ಎರಡು ಫ್ರೆಂಡ್‌ಶಿಪ್ ಹಾಡುಗಳಿವೆ. ಎರಡು ಡ್ಯೂಯೆಟ್ ಹಾಡುಗಳ ಜೊತೆಗೆ ಒಂದು ಪ್ಯಾಥೋಸ್ ಸಾಂಗ್ ಕೂಡ ಚಿತ್ರದಲ್ಲಿದೆ.

'ಬಣ್ಣದ ಕನಸುಗಳು' ಚಿತ್ರದಲ್ಲಿ ಓಂಪ್ರಕಾಶ್ ನಾಯಕ್, ಅಫ್ಜಲ್ ಸೂಪರ್‌ಸ್ಟಾರ್, ಗಣೇಶ ಹಾಗೂ ಭಾಸ್ಕರ್ ಜಿ ನಾಲ್ವರು ನಾಯಕರಾಗಿ ನಟಿಸಿದ್ದಾರೆ. ಮಂಗಳ ನಾಯಕಿಯಾಗಿ ಅಭಿನಯಿಸಿದ್ದಾರೆ. ಉಳಿದ ತಾರಾಗಣದಲ್ಲಿ ರಂಗಭೂಮಿಯ ರಾಜಣ್ಣ, ವೆಂಕಟೇಶ್, ರಾಮ್‌ಜಿ, ಚಂದ್ರಕಾಂತ್, ಮುತ್ತುರಾಜ್, ಅಭಿಸಾರಿಕ, ಲಲಿತಾ ಸೇರಿದಂತೆ ಹಲವು ಕಲಾವಿದರು ಹಾಗೂ ಸಹ ಕಲಾವಿದರು ಅಭಿನಯಿಸಿದ್ದಾರೆ.

ಚಿತ್ರಕ್ಕೆ ರವಿ ಛಾಯಾಗ್ರಹಣ, ಮೋಹಿತ್ ಸಹ ನಿರ್ದೇಶನ, ರುದ್ರೇಶ್ ಮೇಕಪ್ ನಿರ್ವಹಿಸಿದ್ದಾರೆ. ಪತ್ರಿಕಾ ಸಂಪರ್ಕವನ್ನು ವಿ.ಎಂ.ಎಸ್. ಗೋಪಿ ವಹಿಸಿಕೊಂಡಿದ್ದಾರೆ.

ಚಿತ್ರದ ರಿರೆಕಾರ್ಡಿಂಗ್ ಪೂರ್ಣಗೊಂಡ ಬಳಿಕ ಶೀಘ್ರದಲ್ಲೇ ಸೆನ್ಸಾರ್ ಮಂಡಳಿಗೆ ಕಳುಹಿಸಿ, ಮುಂದಿನ ಹಂತದ ಬಿಡುಗಡೆ ಸಿದ್ಧತೆಗಳನ್ನು ಕೈಗೊಳ್ಳಲಾಗುವುದು ಎಂದು ನಿರ್ದೇಶಕ ಓಂಪ್ರಕಾಶ್ ನಾಯಕ್ ತಿಳಿಸಿದ್ದಾರೆ.

## 'ಇಂಡಿಯಾ ಸ್ಕಿಲ್ಸ್–2026'ಗೆ ನೋಂದಣಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ**

**ಗದಗ:** ಗದಗ ಜಿಲ್ಲೆಯ 16ರಿಂದ 25 ವರ್ಷದ ಯುವಕ–ಯುವತಿಯರಿಗೆ ಖಟಿಜುಚಿ ಖಞಟಟಥ ಅಂಟರಿಜಣು–ಣುಂಟ ಏಚಿಡಿಟಿಚಿಣಚಿಇಚಿ–2026ರಲ್ಲಿ ಭಾಗವಹಿಸಲು ಅವಕಾಶವಿದೆ. ವೆಬ್ ಟೆಕ್ನಾಲಜಿ, ಗ್ರಾಫಿಕ್ ಡಿಸೈನ್, ಫ್ಯಾಶನ್ ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್, ಮೆಕಾಟ್ರಾನಿಕ್ಸ್, ಆಟೋಮೊಬೈಲ್, ವೆಲ್ಡಿಂಗ್, ಪ್ಲಂಬಿಂಗ್, ಬ್ಯೂಟಿ ಥೆರಪಿ, ಬೇಕರಿ, ಹೆಲ್ತ್ ಅಂಡ್ ಸೋಷಿಯಲ್ ಕೇರ್, ಐಟಿ ಸೇರಿದಂತೆ ಒಟ್ಟು 63 ಕೌಶಲ್ಯ ಕ್ಷೇತ್ರಗಳಲ್ಲಿ ಸ್ಪರ್ಧೆ ನಡೆಯಲಿದೆ. ಆಯ್ಕೆಯಾದವರಿಗೆ ರಾಜ್ಯ ಹಾಗೂ ರಾಷ್ಟ್ರಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶವಿದೆ. ನೋಂದಣಿ ಸೆ.15ರವರೆಗೆ ಮೂಲಕ ಉಚಿತವಾಗಿ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ 9160649221೬ಕ್ಕೆ ಬೆಳಗ್ಗೆ 10ರಿಂದ ಸಂಜೆ 6ರವರೆಗೆ ಸಂಪರ್ಕಿಸಬಹುದು.

# ಗುಂಡಿಗಳ ರಸ್ತೆಗೆ ಮುಕ್ತಿ ಯಾವಾಗ?



**ವಿಜಯಸಾಕ್ಷಿ ಸುದ್ದಿ**

**ಬೆಟಗೇರಿ:** ಗದಗ–ಬೆಟಗೇರಿ ನಗರೋತ್ಥಾನ ಹಂತ–3ರಡಿ ಹುಲಕೋಟಿ ಶಾಲೆಯ ಮುಂಭಾಗದಿಂದ ರಂಗಪ್ಪಜ್ಜನ ಮಠಕ್ಕೆ ಸಾಗುವ ರಸ್ತೆಯನ್ನು ಸುಮಾರು ಎಂಟು ವರ್ಷಗಳ ಹಿಂದೆ ಸಿ.ಸಿ. ರಸ್ತೆಯಾಗಿ ನಿರ್ಮಿಸಲಾಗಿತ್ತು. ಆದರೆ ಕಳಪೆ ಕಾಮಗಾರಿಯಿಂದಾಗಿ ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ಅಲ್ಲಲ್ಲಿ ಬೃಹದಾಕಾರದ ಗುಂಡಿಗಳು ಬಿದ್ದಿರುವುದರಿಂದ ವಾಹನ ಸವಾರರು ಹಾಗೂ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ಈ ರಸ್ತೆಯ ಕೆಳಭಾಗದಲ್ಲಿ ಒಳಚರಂಡಿ ಪೈಪ್‌ಲೈನ್‌ಗಳು ಸುಮಾರು 15ರಿಂದ 20 ಅಡಿ ಆಳದಲ್ಲಿದ್ದು, ರಸ್ತೆ ನಿರ್ಮಾಣ ಸಂದರ್ಭದಲ್ಲಿ ಈ ಭಾಗಗಳಲ್ಲಿ ಸಮರ್ಪಕವಾಗಿ ಮೆಟ್ಲಿಂಗ್ ಮಾಡದಿರುವುದೇ ರಸ್ತೆ ಮಧ್ಯದಲ್ಲಿ ದೊಡ್ಡ ಗುಂಡಿಗಳು ಬೀಳಲು ಕಾರಣವಾಗಿದೆ ಎಂದು ನಗರಸಭೆ ಸದಸ್ಯ ರಾಘವೇಂದ್ರ ಯಳವತ್ತಿ ಆರೋಪಿಸಿದ್ದಾರೆ.

ಈ ಮಾರ್ಗದಲ್ಲಿ ಹುಲಕೋಟಿ ಪ್ರೌಢ ಹಾಗೂ ಪ್ರಾಥಮಿಕ ಶಾಲೆ, ಐಟಿಐ ಕಾಲೇಜು, ಶರಣಬಸವೇಶ್ವರ ಪ್ರೌಢಶಾಲೆ, ಪ್ರಾಥಮಿಕ ಶಾಲೆ ಹಾಗೂ ಆರೋಗ್ಯ ಕೇಂದ್ರಗಳಿವೆ. ಪ್ರತಿನಿತ್ಯ ಶಾಲಾ ಬಸ್‌ಗಳು ಸೇರಿದಂತೆ ಸುಮಾರು 10ರಿಂದ 12 ವಾಹನಗಳು ಸಂಚರಿಸುತ್ತಿದ್ದು, ಗುಂಡಿಗಳಿಂದಾಗಿ ಲಘು ಅಪಘಾತಗಳು ಸಂಭವಿಸುತ್ತಿವೆ. ಅಲ್ಲದೆ ಶರಣಬಸವೇಶ್ವರ ನಗರ, ಬಸವನಗುಡಿ ಬಡಾವಣೆ, ಶಿವಾಜಿನಗರ, ಗಣೇಶನಗರ ಹಾಗೂ ಕಣಗಿನಹಾಳಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆಯೂ ಇದಾಗಿದೆ.

ರಸ್ತೆ ದುರಸ್ತಿಗೆ ಸಂಬಂಧಿಸಿದಂತೆ ಅಧಿಕಾರಿಗಳಿಗೆ ಹಲವು ಬಾರಿ ಮೌಖಿ–ಕವಾಗಿ ಹಾಗೂ ಲಿಖಿತವಾಗಿ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಯಳವತ್ತಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜಿಲ್ಲಾಧಿಕಾರಿಗಳು, ಜಿಲ್ಲಾ ಯೋಜನಾ ನಿರ್ದೇಶಕರು ಹಾಗೂ ಗದಗ–ಬೆಟಗೇರಿ ನಗರಸಭೆಯ ಕಾರ್ಯಪಾಲಕ ಅಭಿಯಂತರರಿಗೆ ಛಾಯಾಚಿತ್ರ ಸಹಿತ ಮನವಿ ಸಲ್ಲಿಸಲಾಗಿದೆ.

ಹಿಂದಿನ ಜಿಲ್ಲಾ ಉಸ್ತುವಾರಿ ಸಚಿವರು, ಹಾಲಿ ಶಾಸಕರು ಹಾಗೂ ಜಿಲ್ಲಾ ಅಹವಾಲು ಸ್ವೀಕಾರ ಸಂದರ್ಭದಲ್ಲಿಯೂ ಮನವಿ ನೀಡಲಾಗಿದೆ.

ಇತ್ತೀಚೆಗೆ ಬರ ವೀಕ್ಷಣೆಗೆ ಆಗಮಿಸಿದ್ದ ಮುಖ್ಯಮಂತ್ರಿಗಳಿಗೂ ಈ ಕುರಿತು ಮಾಹಿತಿ ನೀಡಿ ಮನವಿ ಸಲ್ಲಿಸಲಾಗಿದೆ. ಆದರೂ ಜಿಲ್ಲಾ ಹಾಗೂ ಸ್ಥಳೀಯ ಮಟ್ಟದ ಅಧಿಕಾರಿಗಳು ಸ್ಥಳ ಪರಿಶೀಲನೆಗೆ ಆಗಮಿಸದಿರುವುದು ವಿಷಾದಕರ ಸಂಗತಿ ಎಂದು ಅವರು ತಿಳಿಸಿದ್ದಾರೆ.

ಹುಲಕೋಟಿ ಪ್ರೌಢಶಾಲೆಯ ಮುಂಭಾಗದ ಗುಂಡಿಗಳು ಇದೀಗ ಬೃಹದಾಕಾರವಾಗಿ ಮಾರ್ಪಟ್ಟಿದ್ದು, ನಿತ್ಯ ಅಪಘಾತದ ಆತಂಕ ಎದುರಾಗಿದೆ. ಇತ್ತೀಚೆಗೆ ಗುಂಡಿಯಿಂದಾಗಿ ಮೋಟಾರ್ ಸೈಕಲ್ ಸವಾರನೊಬ್ಬ ನಿಯಂತ್ರಣ ತಪ್ಪಿ ಅಪಘಾತಕ್ಕೀಡಾಗಿರುವುದು ಸಮಸ್ಯೆಯ ಗಂಭೀರತೆಗೆ ಸಾಕ್ಷಿಯಾಗಿದೆ ಎಂದು ಯಳವತ್ತಿ ಹೇಳಿದ್ದಾರೆ.

ರಸ್ತೆ ಸಮಸ್ಯೆ ಮುಂದುವ–ರಿದರೆ ಮುಂದಿನ ದಿನಗಳಲ್ಲಿ ದೊಡ್ಡ ಮಟ್ಟದ ಅಪಘಾತಗಳು ಸಂಭವಿಸುವ ಸಾಧ್ಯತೆಯಿದೆ. ನಿತ್ಯ ಸಂಚರಿಸುವ ಸವಾರರು ಜಿಲ್ಲಾಡಳಿತ ಹಾಗೂ ನಗರಸಭೆ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಆದ್ದರಿಂದ ಜಿಲ್ಲಾಧಿಕಾರಿಗಳು ಹಾಗೂ ಪೌರಾಯುಕ್ತರು ಕೂಡಲೇ ರಸ್ತೆ ದುರಸ್ತಿ ಕಾಮಗಾರಿ ಕೈಗೊಂಡು ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು. ಇಲ್ಲದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಗದಗ–ಬೆಟಗೇರಿ ನಗರಸಭೆಯ ಸದಸ್ಯ ರಾಘವೇಂದ್ರ ಯಳವತ್ತಿ ಎಚ್ಚರಿಕೆ ನೀಡಿದ್ದಾರೆ.

# ಸೆನ್ಸಾರ್‌ಗೆ ಹೊರಟ 'ಮುತ್ತುರತ್ನ' ಚಲನಚಿತ್ರ



**ವಿಜಯಸಾಕ್ಷಿ ಸುದ್ದಿ**

**ಬೆಂಗಳೂರು:** ಜೈ ಹನುಮಾನ್ ಪ್ರೊಡಕ್ಷನ್‌ನ 'ಮುತ್ತುರತ್ನ' ಕನ್ನಡ ಚಲನಚಿತ್ರದ ಪೋಸ್ಟ್ ಪ್ರೊಡಕ್ಷನ್ ಕಾರ್ಯ ಪೂರ್ಣಗೊಂಡಿದ್ದು, ಇದೀಗ ಚಿತ್ರ ಸೆನ್ಸಾರ್‌ಗೆ ತೆರಳಿದೆ.

'ಒಂದು ಪ್ರೇಮ ಗ್ರಂಥ' ಎಂಬ ಉಪಶೀರ್ಷಿಕೆ ಹೊಂದಿರುವ ಈ ಚಿತ್ರವನ್ನು ಚಿತ್ರದುರ್ಗ ಹಾಗೂ ಹಿರಿಯೂರು ಸುತ್ತಮುತ್ತ 40 ದಿನಗಳ ಕಾಲ ಚಿತ್ರೀಕ–ರಿಸಲಾಗಿದೆ. ಅಶ್ವ ನಾಯಕನಾಗಿ ಹಾಗೂ ಸಹನಾ ಪ್ರಕಾಶ್ ನಾಯಕಿಯಾಗಿ ನಟಿಸಿದ್ದಾರೆ. ತಿಪ್ಪೇಶ್ ಮುದ್ದಾಪುರ, ದೇವು, ಮಲ್ಲಿಕಾ, ರಕ್ಷಿತಾ, ಗೋವಿಂದೇಗೌಡ, ಸಂಜು ಬಸಯ್ಯ, ಗಿರೀಶ್, ಅಪೂರ್ವ ಪವನ್ (ಮಜಾ ಟಾಕೀಸ್), ಹುಲುಗಪ್ಪ ಟಿ., ಕೇಶವಮೂರ್ತಿ ಜಿಎಚ್ ಬಿಜಿಕೆರೆ ಸೇರಿದಂತೆ ಹಲವು ಕಲಾವಿದರು ಅಭಿನಯಿಸಿದ್ದಾರೆ.

ಚಿತ್ರದ ಛಾಯಾಗ್ರಹಣವನ್ನು ಗೋಪಿನಾಥ ಎಂ., ಸಂಕಲನವನ್ನು ಶಿವರಾಜ್ ಮೇಹು, ಸಾಹಸವನ್ನು ಚಂದ್ರು ಬಂಡೆ ಹಾಗೂ ನೃತ್ಯ ನಿರ್ದೇಶನವನ್ನು ಬಾಲು ರೆಕ್ಸ್ ರಾಜು ನಿರ್ವಹಿಸಿದ್ದಾರೆ. ಎಸ್.ವಿ. ಶಿವಕುಮಾರ್, ಡಿವಿಜಿ ಹಾಗೂ ತಿಪ್ಪೇಶ್ ಹಾಲುವರ್ತಿ ಸಾಹಿತ್ಯ ರಚಿಸಿದ್ದಾರೆ.

ಪ್ರಸನ್ನ ಭೋಜಶೆಟ್ಟರ್ ಸಂಗೀತ ಸಂಯೋಜಿಸಿದ್ದು, ಬಾಳು ಬೆಳಗುಂದಿ, ಐಶ್ವರ್ಯ ರಂಗರಾಜನ್, ಅನಿರುದ್ಧ ಶಾಸ್ತ್ರಿ, ಲಹರಿ ಮಹೇಶ್, ರವೀಂದ್ರ ಸೊರಗಾವಿ, ಅನುರಾಮ್ ಹಾಗೂ ಪ್ರಸನ್ನ ಭೋಜಶೆಟ್ಟರ್ ಹಾಡುಗಳಿಗೆ ಧ್ವನಿ ನೀಡಿದ್ದಾರೆ. ಉತ್ತರ ಕರ್ನಾಟಕದ 'ನಾ ಡ್ರೈವರ್ ಪೂಜಾ' ಖ್ಯಾತಿಯ ಪೂಜಾ ಡಿಕೆಡಿ ಚಿತ್ರದಲ್ಲಿನ ಒಂದು ಹಾಡಿಗೆ ನೃತ್ಯ ಮಾಡಿದ್ದು, ಈ ಹಾಡು ಉತ್ತರ ಕರ್ನಾಟಕದ ಪ್ರೇಕ್ಷಕರಿಗೆ ವಿಶೇಷ ಕಿಕ್ ನೀಡಲಿದೆ ಎಂದು ಚಿತ್ರತಂಡ ವಿಶ್ವಾಸ ವ್ಯಕ್ತಪಡಿಸಿದೆ.

ಪ್ರಸಾಧನ ವಿಭಾಗವನ್ನು ಚಂದ್ರು ತಿರುಪತಿ ಹಾಗೂ ಎಂ.ಜಿ. ಕಲ್ಲೇಶ್ ನಿರ್ವಹಿಸಿದ್ದಾರೆ. ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ್ ಹಂಡಿಗಿ ಪತ್ರಿಕಾ ಸಂಪರ್ಕದ ಜವಾಬ್ದಾರಿ ವಹಿಸಿಕೊಂಡಿದ್ದಾರೆ. ಮಹೇಶ್ ಜಗತಾಪ್ ಹಾಗೂ ಸತೀಶ್ ಚೆಕ್ಕಂದವಾಡಿ ಸಹ ನಿರ್ದೇಶಕರಾಗಿದ್ದಾರೆ. ರಂಜಿತ್, ಕುಶಾಲ್ ಹಾಗೂ ಅನೂಪ್ ನಿರ್ದೇಶನ ತಂಡದಲ್ಲಿದ್ದಾರೆ. ಸ್ಟಿಲ್ ಛಾಯಾಗ್ರಹಣವನ್ನು ರಘು ನಿರ್ವಹಿಸಿದ್ದಾರೆ.

ಚಿತ್ರಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ ಹಾಗೂ ಸಾಹಿತ್ಯ ರಚಿಸಿ ನಿರ್ದೇಶನದ ಹೊಣೆಯನ್ನು ತಿಪ್ಪೇಶ್ ಹಾಲುವರ್ತಿ ವಹಿಸಿಕೊಂಡಿದ್ದಾರೆ. ಹುಲುಗಪ್ಪ ಟಿ. ಹಾಗೂ ರುದ್ರಪ್ಪ ಪಿಎಚ್. ಚಿತ್ರಕ್ಕೆ ಬಂಡವಾಳ ಹೂಡಿದ್ದು, ಕೇಶವಮೂರ್ತಿ ಜಿಎಚ್ ಬಿಜಿಕೆರೆ ಹಾಗೂ ಯಶೋದ ಬಾಯಿ ಸಹ ನಿರ್ಮಾಪಕರಾಗಿದ್ದಾರೆ.

ಚಿತ್ರ ಉತ್ತಮವಾಗಿ ಮೂಡಿಬಂದಿದ್ದು, ಸೆನ್ಸಾರ್ ಪ್ರಕ್ರಿಯೆ ಪೂರ್ಣಗೊಂಡ ತಕ್ಷಣ ಚಿತ್ರವನ್ನು ಬಿಡುಗಡೆ ಮಾಡುವುದಾಗಿ ಚಿತ್ರತಂಡ ತಿಳಿಸಿದೆ.

### ಸಣ್ಣ ಸುದ್ದಿಗಳು

## ಸಹಾಯಧನಕ್ಕೆ ಅರ್ಜಿ ಅವಧಿ ವಿಸ್ತರಣೆ

ವಿಜಯಸಾಕ್ಷಿ ಸುದ್ದಿ


**ಗದಗ:** ಮೀನುಗಾರಿಕೆ ಇಲಾಖೆ ಗದಗ ವತಿಯಿಂದ 2026–27ನೇ ಸಾಲಿನಲ್ಲಿ ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ ಯೋಜನೆಯಡಿ ವಿವಿಧ ಸೌಲಭ್ಯಗಳನ್ನು ಒದಗಿಸಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಸೆಪ್ಟೆಂಬರ್ 21ರವರೆಗೆ ವಿಸ್ತರಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಮೀನುಗಾರರಿಗೆ ಉಚಿತ ಮೀನುಗಾರಿಕೆ ಸಲಕರಣೆ ಕಿಟ್‌ಗಳ ವಿತರಣೆ, ಮೀನು ಕೃಷಿಗೆ ಸಹಾಯಧನ, ಕೊಳ ನಿರ್ಮಾಣ ಹಾಗೂ ಹೂಡಿಕೆ ವೆಚ್ಚಕ್ಕೆ ಸಹಾಯಧನ, ಮೀನು ಮಾರುಕಟ್ಟೆಗಳ ನಿರ್ಮಾಣ ಹಾಗೂ ಮೀನು ಮಾರಾಟಕ್ಕೆ ಸಹಾಯ ಯೋಜನೆಯಡಿ ದ್ವಿಚಕ್ರ ವಾಹನ ಮತ್ತು ಐಸ್‌ಬಾಕ್ಸ್ ಖರೀದಿಸಿದವರಿಗೆ ಸಹಾಯಧನ ನೀಡಲಾಗುವುದು.
ಇದರೊಂದಿಗೆ ಮೀನುಗಾರರಿಗೆ ಉಚಿತ ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ, ಕೆರೆ/ಜಲಾಶಯಗಳ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಗಳನ್ನು ಪಾಲನೆ ಮಾಡಲು ಸಹಾಯಧನ, ಮೀನುಮರಿ ಖರೀದಿಗೆ ಸಹಾಯಧನ ಹಾಗೂ ಗ್ರಾಮ ಪಂಚಾಯಿತಿ ಕೆರೆಗಳಿಗೆ ಉಚಿತವಾಗಿ ಮೀನುಮರಿ ದಾಸ್ತಾನು ಮಾಡುವ ಯೋಜನೆಗಳಿಗೂ ಸಹಾಯಧನ ನೀಡಲಾಗುವುದು.
ಅರ್ಹ ಅಭ್ಯರ್ಥಿಗಳು ಗದಗ ಜಿಲ್ಲಾಡಳಿತದ ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.
ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪನಿರ್ದೇಶಕರ ಕಚೇರಿ, ಗದಗ (ಮೊ. 8073649362) ಹಾಗೂ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ, ಮುಂಡರಗಿ (ಮೊ. 8095792530) ಸಂಪರ್ಕಿಸಬಹುದು ಎಂದು ಗದಗ ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ವಿಜಯಸಾಕ್ಷಿ ಸುದ್ದಿ

**ಗದಗ:** ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2026–27ನೇ ಸಾಲಿನಲ್ಲಿ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಯೋಜನೆಗಳಡಿ ಸಹಾಯಧನ ಹಾಗೂ ಸಾಲ ಸೌಲಭ್ಯ ಪಡೆಯಲು ಅರ್ಹರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸೇವಾ ಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ಕೊನೆಯ ದಿನವಾಗಿದ್ದು, ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆಯ ದಿನಾಂಕ ಇರುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ. ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ಸರ್ಕಾರದ ಆದೇಶ ಸಂಖ್ಯೆ ಸಕಇ/225/ಬಿಸಿಎ/2000, ದಿನಾಂಕ 30–03–2002ರನ್ವಯ ವಿಶ್ವಕರ್ಮ ಸಮುದಾಯ ಹಾಗೂ ಅದರ ಉಪಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರ ಹೊಂದಿರಬೇಕು. ವಯೋಮಿತಿ 18ರಿಂದ 55 ವರ್ಷಗಳೊಳಗಿರಬೇಕು. ನಿಗಮ ಅಥವಾ ಸರ್ಕಾರದ ಯಾವುದೇ ಯೋಜನೆಯಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು. ಒಂದು ಕುಟುಂಬಕ್ಕೆ ಒಬ್ಬರಿಗೆ ಮಾತ್ರ ಸೌಲಭ್ಯ ನೀಡಲಾಗುವುದು. ಅರಿವು ಯೋಜನೆಯಡಿ ವಯೋಮಿತಿ 18ರಿಂದ 30 ವರ್ಷಗಳೊಳಗಿದ್ದು, ವಾರ್ಷಿಕ ವರಮಾನ ರೂ.3.50 ಲಕ್ಷದೊಳಗಿರಬೇಕು. ಸ್ವಾವಲಂಬಿ ಸಾರಥಿ ಯೋಜನೆಗೆ 21ರಿಂದ 45 ವರ್ಷದೊಳಗಿನವರು ಅರ್ಜಿ ಸಲ್ಲಿಸಬಹುದು. ಅರ್ಜಿದಾರರ ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆ ಆಧಾರ್ ಸಂಖ್ಯೆಗೆ ಜೋಡಣೆಯಾಗಿರಬೇಕು.
ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದಲ್ಲಿ ರೂ.98,000 ಹಾಗೂ ನಗರ ಪ್ರದೇಶದಲ್ಲಿ ರೂ.1,20,000 ಮಿತಿಯೊಳಗಿರಬೇಕು. ಫಲಾನುಭವಿಗಳ ಆಯ್ಕೆಯಲ್ಲಿ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1ರಷ್ಟು ಮೀಸಲಾತಿ ಕಲ್ಪಿಸಲಾಗಿದೆ.
ಗಂಗಾ ಕಲ್ಯಾಣ ಯೋಜನೆಯಡಿ ದಕ್ಷಿಣ ಕನ್ನಡ, ಉಡುಪಿ, ಕೊಡಗು, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಗಳಲ್ಲಿ ಕನಿಷ್ಠ ಒಂದು ಎಕರೆ ಜಮೀನು ಹೊಂದಿರಬೇಕು. ಇತರ ಜಿಲ್ಲೆಗಳಲ್ಲಿ ಕನಿಷ್ಠ ಎರಡು ಎಕರೆ ಜಮೀನು ಹೊಂದಿರಬೇಕು. ವಿದೇಶಿ ವ್ಯಾಸಂಗ ಯೋಜನೆಗೆ ವಾರ್ಷಿಕ ವರಮಾನ ರೂ.15 ಲಕ್ಷದೊಳಗಿರಬೇಕು. ಸ್ವಾತಂತ್ರ್ಯ ಅಮೃತ ಮುನ್ನಡೆ ಯೋಜನೆಗೆ ಅರ್ಜಿಯನ್ನು 'kaushalkar' ವೆಬ್‌ಸೈಟ್ ಮೂಲಕ ಸಲ್ಲಿಸಬೇಕು.
ಅರ್ಜಿ ಸಲ್ಲಿಸುವಾಗ ಆಧಾರ್ ಕಾರ್ಡ್‌ನಲ್ಲಿರುವ ಅರ್ಜಿದಾರರ ಹೆಸರು, ವಿಳಾಸ, ಜಾತಿ ಮತ್ತು ಆದಾಯ ಪ್ರಮಾಣಪತ್ರ ಹಾಗೂ ಬ್ಯಾಂಕ್ ಪಾಸ್‌ಬುಕ್‌ನಲ್ಲಿರುವ ಮಾಹಿತಿಗಳು ಪರಸ್ಪರ ತಾಳೆಯಾಗಿರಬೇಕು. ಶ್ರೀ, ಶ್ರೀಮತಿ, ಕುಮಾರಿ ಸೇರಿದಂತೆ ಯಾವುದೇ ಮಾಹಿತಿಯಲ್ಲೂ ವ್ಯತ್ಯಾಸ ಇರಬಾರದು ಎಂದು ನಿಗಮ ತಿಳಿಸಿದೆ. ಬೆಂಗಳೂರು ಒನ್, ಕರ್ನಾಟಕ ಒನ್, ಅಟಲ್‌ಜಿ ಜನಸ್ನೇಹಿ ಕೇಂದ್ರ ಹಾಗೂ ನಾಗರಿಕ ಸೇವಾ ಕೇಂದ್ರಗಳಲ್ಲಿ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ವೆಬ್‌ಸೈಟ್ ಅಥವಾ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ 080–22374848, 7899899039 ಸಂಪರ್ಕಿಸಬಹುದು. ಗದಗ ಜಿಲ್ಲೆಯ ಅರ್ಜಿದಾರರು ಜಿಲ್ಲಾ ಆಡಳಿತ ಭವನದ ರೂಂ ನಂ.202, 2ನೇ ಮಹಡಿ, ಹುಬ್ಬಳ್ಳಿ ರಸ್ತೆ, ಗದಗದಲ್ಲಿರುವ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಚೇರಿಯಲ್ಲಿ ಪೂರ್ವಾಹ್ನ 10ರಿಂದ ಸಂಜೆ 5.30ರವರೆಗೆ ಜಿಲ್ಲಾ ವ್ಯವಸ್ಥಾಪಕರನ್ನು ಸಂಪರ್ಕಿಸಬಹುದು. 2024–25 ಹಾಗೂ 2025–26ನೇ ಸಾಲಿನಲ್ಲಿ ಯೋಜನೆಗಳಿಗೆ ಅರ್ಜಿ ಸಲ್ಲಿಸಿದ್ದ ಅರ್ಜಿದಾರರು ಮತ್ತೊಮ್ಮೆ ಬೇರೆ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿದೆ.
ಸೇವಾ ಸಿಂಧು ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ಕೊನೆಯ ದಿನವಾಗಿದ್ದು, ನಂತರ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ
### ಕಾಶವ್ವ ಕಟಗಿ



**ಲಕ್ಷ್ಮೇಶ್ವರ:** ಪಟ್ಟಣದ ಹಳ್ಳದಕೇರಿ ಓಣಿಯ ಹಿರಿಯ ನಿವಾಸಿ ಕಾಶವ್ವ ದೇವೇಂದ್ರಪ್ಪ ಕಟಗಿ (78) ಅವರು ಗುರುವಾರ ನಿಧನರಾದರು. ಮೃತರಿಗೆ ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವಿದೆ.

### ಸೆ. 21ರಂದು ಕ್ರೀಡಾ–ಸಾಂಸ್ಕೃತಿಕ ಸ್ಪರ್ಧೆ ▌ಅ. 1ರಂದು ವಿಜೇತರಿಗೆ ಬಹುಮಾನ

# ಹಿರಿಯ ನಾಗರಿಕರಿಗೆ ಕ್ರೀಡೆ, ಸಂಸ್ಕೃತಿಯ ಸಂಭ್ರಮ

ವಿಜಯಸಾಕ್ಷಿ ಸುದ್ದಿ

**ಗದಗ:** ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಹಿರಿಯ ನಾಗರಿಕರಿಗಾಗಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲು ಜಿಲ್ಲಾಡಳಿತ ಮುಂದಾಗಿದೆ. ಸೆಪ್ಟೆಂಬರ್ 21ರಂದು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ವಿವಿಧ ಸ್ಪರ್ಧೆಗಳನ್ನು ವ್ಯವಸ್ಥಿತವಾಗಿ ನಡೆಸಲಾಗುವುದು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಶ್ರೀದೇವಿ ಎಸ್.ಎನ್. ತಿಳಿಸಿದರು.



ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಹಿನ್ನೆಲೆಯಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಿರಿಯ ನಾಗರಿಕ ಮಹಿಳೆಯರು ಹಾಗೂ ಪುರುಷರಿಗೆ ಪ್ರತ್ಯೇಕವಾಗಿ 60ರಿಂದ 69, 70ರಿಂದ 79 ಹಾಗೂ 80 ವರ್ಷ ಮೇಲ್ಪಟ್ಟವರ ವಿಭಾಗಗಳಲ್ಲಿ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗುವುದು. ಕ್ರೀಡಾ ಸ್ಪರ್ಧೆಗಳಲ್ಲಿ ಬಿರುಸಿನ ನಡಿಗೆ, ಬಕೆಟ್‌ಗೆ ಚೆಂಡು ಎಸೆಯುವುದು, ಮ್ಯೂಸಿಕಲ್ ಚೇರ್, ಚೆಸ್ ಹಾಗೂ ಕೇರಂ ಸ್ಪರ್ಧೆಗಳು ನಡೆಯಲಿವೆ.

ಅದೇ ರೀತಿ ಏಕಪಾತ್ರಾಭಿನಯ ಹಾಗೂ ಗಾಯನ ಸ್ಪರ್ಧೆಗಳನ್ನು ಸಾಂಸ್ಕೃತಿಕ ವಿಭಾಗದಲ್ಲಿ ಆಯೋಜಿಸಲಾಗುವುದು. ಸ್ಪರ್ಧೆಗಳಲ್ಲಿ ಭಾಗವಹಿಸುವ ಹಿರಿಯ ನಾಗರಿಕರು ನಿಯಮಗಳನ್ನು ಪಾಲಿಸುವಂತೆ ಸೂಚಿಸಲಾಗಿದೆ. ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸುವವರು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಹಾಗೂ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸುವವರು ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಅಕ್ಟೋಬರ್ 1ರಂದು ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆಯುವ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಸಮಾರಂಭದಲ್ಲಿ ಬಹುಮಾನ ವಿತರಿಸಲಾಗುವುದು. ಕಾರ್ಯಕ್ರಮದ ಯಶಸ್ಸಿಗೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಲಾಗಿದೆ. ದಿನಾಚರಣೆ ಹಿನ್ನೆಲೆಯಲ್ಲಿ ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಣ, ವೇದಿಕೆ, ಉಪಾಹಾರ, ಪುಸ್ತಕ, ಆಸನ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ವಿವಿಧ ಸಿದ್ಧತೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರು, ಶಾಲಾ ಶಿಕ್ಷಣ ಇಲಾಖೆಯ ಡಿವೈಪಿಸಿ ಮುತ್ತಪ್ಪ ಕಂಬಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸಾಗರ ಚವ್ಹಾಣ, ಹಿರಿಯ ನಾಗರಿಕರ ಸಂಘದ ತಾಲೂಕು ಘಟಕದ ಅಧ್ಯಕ್ಷರು, ಹಿರಿಯ ನಾಗರಿಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಹಿರಿಯ ನಾಗರಿಕರಲ್ಲಿರುವ ಪ್ರತಿಭೆ ಹಾಗೂ ಉತ್ಸಾಹವನ್ನು ಗುರುತಿಸುವ ಉದ್ದೇಶದಿಂದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ. ಎಲ್ಲ ಅರ್ಹ ಹಿರಿಯ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು.
> **– ಶ್ರೀದೇವಿ ಎಸ್.ಎನ್., ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ**

### ಉತ್ತಮ ಮಳೆ-ಬೆಳೆಗಾಗಿ ಬಸವೇಶ್ವರ, ವೀರಭದ್ರೇಶ್ವರರಿಗೆ ವಿಶೇಷ ಪೂಜೆ


## 30 ವರ್ಷಗಳ ಧಾರ್ಮಿಕ ಪರಂಪರೆಗೆ ಭಕ್ತಿಯ ಸ್ಪರ್ಶ!

ವಿಜಯಸಾಕ್ಷಿ ಸುದ್ದಿ

**ಗಜೇಂದ್ರಗಡ:** ಶ್ರಾವಣ ಅಮಾವಾಸ್ಯೆಯ ಪವಿತ್ರ ದಿನದ ಅಂಗವಾಗಿ ಗಜೇಂದ್ರಗಡ ಸಮೀಪದ ಕಾಲಕಾಲೇಶ್ವರ ಗ್ರಾಮದ ಪಾದಗಟ್ಟೆ ಬಸವೇಶ್ವರ ಹಾಗೂ ಕಣವಿ ವೀರಭದ್ರೇಶ್ವರರ ಸನ್ನಿಧಿಯಲ್ಲಿ ಶುಕ್ರವಾರ ವಿಶೇಷ ಅಭಿಷೇಕ, ಪೂಜೆ ಹಾಗೂ ಅನ್ನ ಸಂತರ್ಪಣೆ ಭಕ್ತಿಭಾವದಿಂದ ಜರುಗಿತು.

ಪ್ರಗತಿಪರ ರೈತ ಸೋಮಪ್ಪ ರಾಠೋಡ ಅವರು ಕಳೆದ 30 ವರ್ಷಗಳಿಂದ ನಿರಂತರವಾಗಿ ಈ ಧಾರ್ಮಿಕ ಸೇವೆಯನ್ನು ನಡೆಸಿಕೊಂಡು ಬರುತ್ತಿದ್ದು, ಅದರಂತೆ ಈ ವರ್ಷವೂ ಲೋಕಕಲ್ಯಾಣ ಹಾಗೂ ಉತ್ತಮ ಮಳೆ–ಬೆಳೆಗಾಗಿ ವಿಶೇಷ ಅಭಿಷೇಕ ಮತ್ತು ಪೂಜಾ ಕಾರ್ಯಕ್ರಮ ನೆರವೇರಿಸಿದರು.

ಕೃಷಿ ಪ್ರಧಾನ ಗ್ರಾಮೀಣ ಬದುಕಿನಲ್ಲಿ ಮಳೆ ಮತ್ತು ಬೆಳೆ ರೈತರ ಜೀವನಾಡಿಯಾಗಿದ್ದು, ಸಮೃದ್ಧ ಮಳೆ ಸುರಿದು ಕೆರೆ–ಕಟ್ಟೆಗಳು ತುಂಬಿ, ಭೂಮಿಯಲ್ಲಿ ಹಸಿರು ಹೊದಿಕೆ ಮೂಡಬೇಕು. ರೈತರ ಹೊಲಗಳಲ್ಲಿ ಉತ್ತಮ ಬೆಳೆ ಬಂದು, ಜನ–ಜಾನುವಾರುಗಳಿಗೆ ಸಮೃದ್ಧಿ ದೊರೆಯಬೇಕು ಎಂಬ ಆಶಯದೊಂದಿಗೆ ಬಸವೇಶ್ವರ ಹಾಗೂ ವೀರಭದ್ರೇಶ್ವರರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.



ಅಭಿಷೇಕದ ಸಂದರ್ಭದಲ್ಲಿ ವಿವಿಧ ಪೂಜಾ ವಿಧಿವಿಧಾನಗಳೊಂದಿಗೆ ದೇವರಿಗೆ ಅಭಿಷೇಕ ನೆರವೇರಿಸಿ, ನಾಡಿನ ಒಳಿತಿಗಾಗಿ, ಸಕಲ ಜೀವಿಗಳ ಕಲ್ಯಾಣಕ್ಕಾಗಿ ಹಾಗೂ ಉತ್ತಮ ಮಳೆ–ಬೆಳೆ ಸಮೃದ್ಧಿಗಾಗಿ ಭಕ್ತಿಪೂರ್ವಕವಾಗಿ ಪ್ರಾರ್ಥಿಸಲಾಯಿತು.


ಕಳೆದ ಮೂರು ದಶಕಗಳಿಂದ ಯಾವುದೇ ವ್ಯತ್ಯಯವಿಲ್ಲದೆ ನಡೆಯುತ್ತಿರುವ ಈ ಧಾರ್ಮಿಕ ಸೇವೆ ಕಾಲಕಾಲೇಶ್ವರ ಗ್ರಾಮದ ಧಾರ್ಮಿಕ ಪರಂಪರೆಯೊಂದಿಗೆ ಬೆಸೆದುಕೊಂಡಿದೆ. ಪ್ರತಿವರ್ಷ ಶ್ರಾವಣ ಅಮಾವಾಸ್ಯೆಯಂದು ಗ್ರಾಮಸ್ಥರು ಹಾಗೂ ಭಕ್ತರು ಒಂದೆಡೆ ಸೇರಿ ವಿಶೇಷ ಪೂಜೆ ಸಲ್ಲಿಸಿ, ದೇವರ ದರ್ಶನ ಪಡೆಯುವ ಮೂಲಕ ಭಕ್ತಿಭಾವ ಮೆರೆಯುತ್ತಿದ್ದಾರೆ.

ವಿಶೇಷ ಪೂಜೆಯ ಬಳಿಕ ಭಕ್ತರು, ಗ್ರಾಮಸ್ಥರು ಹಾಗೂ ಆಗಮಿಸಿದ ಸಾರ್ವಜನಿಕರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಧಾರ್ಮಿಕ ಆಚರಣೆಯ ಜತೆಗೆ ಅನ್ನದಾನದ ಮೂಲಕ ಸೇವಾ ಮನೋಭಾವವನ್ನು ಸಾರಲಾಯಿತು.

ಈ ಸಂದರ್ಭದಲ್ಲಿ ಗ್ರಾ.ಪಂ. ಮಾಜಿ ಸದಸ್ಯ ಕಳಕಪ್ಪ ಹೂಗಾರ, ಸಮಾಜ ಸೇವಕಿ ನಿರ್ಮಲಾ ತರವಾಡೆ, ಭಾಗ್ಯಶ್ರೀ ಹುರಕಡ್ಲಿ, ಸದ್ದಾಂಹುಸೇನ ಜಿಗಳೂರ, ಮಂಜುನಾಥ ರಾಠೋಡ, ಸೀತಲ್ ಓಲೇಕಾರ, ವಿರೇಶ ರಾಠೋಡ, ಹನಮಂತ ರಾಠೋಡ, ನಿಂಗಪ್ಪ ಮುದಗಲ್, ರವಿಕುಮಾರ್ ತಳಗೇರಿ, ಬಸವರಾಜ ನೆಲಜೇರಿ, ಗಣೇಶ ಕಬಾಡೆ, ಆಕಾಶ ತಾಳಿಕೋಟಿ ಸೇರಿದಂತೆ ಗ್ರಾಮಸ್ಥರು, ಭಕ್ತರು ಹಾಗೂ ಗಣ್ಯರು ಉಪಸ್ಥಿತರಿದ್ದರು.

ವಿಶೇಷ ಪೂಜೆ ಹಾಗೂ ಅನ್ನಸಂತರ್ಪಣೆಯಲ್ಲಿ ಪಾಲ್ಗೊಂಡ ಭಕ್ತರು ಬಸವೇಶ್ವರ ಮತ್ತು ಕಣವಿ ವೀರಭದ್ರೇಶ್ವರರ ದರ್ಶನ ಪಡೆದು, ನಾಡಿಗೆ ಉತ್ತಮ ಮಳೆ, ರೈತರಿಗೆ ಸಮೃದ್ಧ ಬೆಳೆ, ಸಕಲರಿಗೂ ಆರೋಗ್ಯ–ನೆಮ್ಮದಿ ಹಾಗೂ ಲೋಕಕಲ್ಯಾಣ ಕರುಣಿಸಲಿ ಎಂದು ಪ್ರಾರ್ಥಿಸಿದರು.

## ಬೀದಿ ದನಗಳ ಜೀವ ರಕ್ಷಣೆಗೆ ರೇಡಿಯಂ ಪಟ್ಟಿಯ ರಕ್ಷಾಕವಚ



ವಿಜಯಸಾಕ್ಷಿ ಸುದ್ದಿ

**ಗದಗ:** ರಾತ್ರಿ ವೇಳೆ ರಸ್ತೆಗಳಲ್ಲಿ ಸಂಚರಿಸುವ ಬೀದಿ ದನಗಳು ವಾಹನಗಳಿಗೆ ಕಾಣದೆ ಅಪಘಾತಕ್ಕೀಡಾಗುವುದನ್ನು ತಪ್ಪಿಸಲು ಗದಗ–ಬೆಟಗೇರಿ ಲಯನ್ಸ್ ಕ್ಲಬ್ ಹಾಗೂ ಭಗತ್‌ಸಿಂಗ್ ಅಭಿಮಾನಿ ಬಳಗದ ಸಹಯೋಗದಲ್ಲಿ ವಿಶೇಷ ಪ್ರಾಣಿ ಕಲ್ಯಾಣ ಕಾರ್ಯ ಕೈಗೊಳ್ಳಲಾಯಿತು.

ಅವಳಿ ನಗರದ ವಿವಿಧ ಬಡಾವಣೆಗಳಲ್ಲಿ ಸಂಚರಿಸುತ್ತಿದ್ದ ಹಸು, ದನ–ಕರುಗಳ ಕೊರಳಿಗೆ ಪ್ರತಿಫಲಿತ ರೇಡಿಯಂ ಪಟ್ಟಿಗಳನ್ನು ಅಳವಡಿಸಲಾಯಿತು.

ವಾಹನಗಳ ಹೆಡ್‌ಲೈಟ್ ಬೆಳಕು ಬಿದ್ದಾಗ ಪಟ್ಟಿಗಳು ಹೊಳೆಯುವುದರಿಂದ ದೂರದಿಂದಲೇ ದನಗಳ ಇರುವಿಕೆ ತಿಳಿದು ಅಪಘಾತ ತಪ್ಪಿಸಲು ಸಹಕಾರಿಯಾಗಲಿದೆ.

ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸದಸ್ಯರು ಖುದ್ದು ರಸ್ತೆಗಿಳಿದು ಕಾರ್ಯದಲ್ಲಿ ಪಾಲ್ಗೊಂಡರು.


## ಅಂಬಾಭವಾನಿ ದೇವಸ್ಥಾನದಲ್ಲಿ ಛಪ್ಪನ್ ಭೋಗ್ ನೈವೇದ್ಯ

ವಿಜಯಸಾಕ್ಷಿ ಸುದ್ದಿ

**ಗದಗ:** ನಗರದ ಹುಡ್ಕೋ ಬಡಾವಣೆಯ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ಎಸ್–ಎಸ್‌ಕೆ ಮಹಿಳಾ ಮಂಡಳದ ವತಿಯಿಂದ ಸತ್ಯನಾರಾಯಣ ಪೂಜೆ ಹಾಗೂ ವಿಶೇಷ ಛಪ್ಪನ್ ಭೋಗ್ ನೈವೇದ್ಯ ಕಾರ್ಯಕ್ರಮ ಶ್ರದ್ಧಾಭಕ್ತಿಯಿಂದ ನಡೆಯಿತು.

ಪ್ರತಿ ವರ್ಷದಂತೆ ಈ ವರ್ಷವೂ ಸತ್ಯನಾರಾಯಣ ಪೂಜೆ ನೆರವೇರಿಸಲಾಗಿದ್ದು, ವಿಶೇಷವಾಗಿ ಛಪ್ಪನ್ ಭೋಗ್ ನೈವೇದ್ಯ ಅರ್ಪಿಸಲಾಯಿತು.

ಮಹಿಳಾ ಮಂಡಳದ ಸದಸ್ಯೆಯರು ತಮ್ಮ ಮನೆಗಳಲ್ಲಿಯೇ ತಯಾರಿಸಿದ ವಿವಿಧ ಬಗೆಯ ಸಿಹಿ ಪದಾರ್ಥಗಳು, ಹಾಲಿನ ಖಾದ್ಯಗಳು, ಅನ್ನದ ವಿವಿಧ ತಿನಿಸುಗಳು, ಪಲ್ಯ, ತಿಂಡಿಗಳು, ಹಣ್ಣು ಹಾಗೂ ಒಣ ಹಣ್ಣುಗಳನ್ನು ಶ್ರೀ ಸತ್ಯನಾರಾಯಣ ಸ್ವಾಮಿಗೆ (ಕೃಷ್ಣನಿಗೆ) ನೈವೇದ್ಯವಾಗಿ ಅರ್ಪಿಸಿದರು.



ಬೆಳಿಗ್ಗೆ ಶ್ರೀ ಅಂಬಾಭವಾನಿ ಮಾತೆಗೆ ಅಭಿಷೇಕ ನೆರವೇರಿಸುವುದರೊಂದಿಗೆ ಪೂಜಾ ಕೈಂಕರ್ಯಗಳು ಆರಂಭಗೊಂಡವು.

ಬಳಿಕ ಸತ್ಯನಾರಾಯಣ ಪೂಜೆ, ಛಪ್ಪನ್ ಭೋಗ್ ನೈವೇದ್ಯ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು.

ದೇವ ಸ್ಥಾನದ ಅರ್ಚಕ ಶ್ರೀನಿವಾಸ ಭಟ್ಟರು ಎಲ್ಲ ಪೂಜಾ ವಿಧಿವಿಧಾನಗಳನ್ನು ಶ್ರದ್ಧಾಭಕ್ತಿ ಯಿಂದ ನೆರವೇರಿಸಿದರು.

ಮಹಿಳಾ ಮಂಡಳದ ಪದಾಧಿಕಾರಿಗಳು, ಸದಸ್ಯೆಯರು ಹಾಗೂ ಭಕ್ತರು ಪೂಜೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡರು.

ಅಧ್ಯಕ್ಷ ಫಕ್ಕೀರಸಾ ಭಾಂಡಗೆ, ಚೇರ್ಮನ್ ಪರಶುರಾಮಸಾ ಬದಿ ಹಾಗೂ ಮಾರುತಿ ಪವಾರ್ ದೇವಸ್ಥಾನಕ್ಕೆ ಆಗಮಿಸಿ ಪೂಜೆಯಲ್ಲಿ ಪಾಲ್ಗೊಂಡರು.

## ಬೆರಳಚ್ಚು ಪರೀಕ್ಷೆಯಲ್ಲಿ ಶ್ರೀ ಕಲ್ಮೇಶ್ವರ ವಿದ್ಯಾಲಯಕ್ಕೆ ಶೇ.94.44 ಫಲಿತಾಂಶ



ವಿಜಯಸಾಕ್ಷಿ ಸುದ್ದಿ

**ಗದಗ:** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ, ಬೆಂಗಳೂರು ನಡೆಸಿದ 2026ರ ಜುಲೈ ತಿಂಗಳ ಬೆರಳಚ್ಚು ವಾರ್ಷಿಕ ಪರೀಕ್ಷೆಯಲ್ಲಿ ನಗರದ ಶ್ರೀ ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯವು ಶೇ.94.44ರಷ್ಟು ಫಲಿತಾಂಶ ದಾಖಲಿಸಿದೆ.
ಪರೀಕ್ಷೆಯಲ್ಲಿ ಇಂಗ್ಲಿಷ್ ಬೆರಳಚ್ಚು ಸೀನಿಯರ್ ವಿಭಾಗದಲ್ಲಿ ಮುಸ್ಕಾನ ಮುಲ್ಲಾ ಶೇ.90.50, ಇಂಗ್ಲಿಷ್ ಬೆರಳಚ್ಚು ಜೂನಿಯರ್ ವಿಭಾಗದಲ್ಲಿ ವಾಹಿದಾ ಮುರಾದಖಾನ ಶೇ.89.50, ಕನ್ನಡ ಬೆರಳಚ್ಚು ಸೀನಿಯರ್ ವಿಭಾಗದಲ್ಲಿ ಗೌರಿ ಆರ್. ಶಿಲ್ಪಿ ಶೇ.83 ಹಾಗೂ ಕನ್ನಡ ಬೆರಳಚ್ಚು ಜೂನಿಯರ್ ವಿಭಾಗದಲ್ಲಿ ಪ್ರಾರ್ಥನಾ ಶೀರೂಳ ಶೇ.85ರಷ್ಟು ಅಂಕ ಗಳಿಸಿ ಉತ್ತಮ ಸಾಧನೆ ಮಾಡಿದ್ದಾರೆ.
ಇದಲ್ಲದೆ ಸೌಭಾಗ್ಯ ಕಗ್ಗಲಗೌಡರ ಶೇ.88.50, ಆದರ್ಶ ಪೂಜಾರ ಶೇ.85, ಅಫ್ಜಲ್ ಬಳ್ಳಾರಿ ಶೇ.84, ಗಂಗಮ್ಮ ಕಟ್ನಾಕಿ ಶೇ.87.50, ಸತ್ಯಮ್ಮ ಬೇಲೇರಿ ಶೇ.86.50, ಕವಿತಾ ಅಂಬಿಗೇರ ಶೇ.87, ಸಾನಿಯಾ ಪೆಂಡಾರಿ ಶೇ.86, ಸೋನು ವಾಲ್ಮೀಕಿ ಶೇ.85, ಭವಾನಿ ಬೀರಕಟ್ಟಿ ಶೇ.76.50, ಸಹನಾ ಗದಗ ಶೇ.79.50, ನೂರಹಬೀಬಾ ಶೇ.82.50 ಹಾಗೂ ಸೌಮ್ಯ ಏಗ್ನೂರ ಶೇ.79.50ರಷ್ಟು ಅಂಕ ಪಡೆದಿದ್ದಾರೆ, ವಿದ್ಯಾಲಯ ಶೇ.94.44ರಷ್ಟು ಫಲಿತಾಂಶ ದಾಖಲಿಸಿದೆ.

### ವಲಯ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಿದ ರವಿಕಾಂತ ಅಂಗಡಿ

## ಗ್ರಾಮೀಣ ಕ್ರೀಡೆಗಳಿಗೆ ಹೆಚ್ಚಿನ ಪ್ರೋತ್ಸಾಹ ಅಗತ್ಯ

ವಿಜಯಸಾಕ್ಷಿ ಸುದ್ದಿ

**ಶಿರಹಟ್ಟಿ:** ಗ್ರಾಮೀಣ ವಿದ್ಯಾರ್ಥಿಗಳಲ್ಲಿ ಕ್ರೀಡಾ ಪ್ರತಿಭೆ ಹೆಚ್ಚಿದ್ದು, ಕ್ರೀಡಾ ಕ್ಷೇತ್ರದಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಹೆಚ್ಚಿನ ಸಾಧನೆ ಮಾಡುತ್ತಿದ್ದಾರೆ. ಹೀಗಾಗಿ ಗ್ರಾಮೀಣ ಕ್ರೀಡೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಅಗತ್ಯವಿದೆ ಎಂದು ವಕೀಲ ಹಾಗೂ ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ ಹೇಳಿದರು.



ಮಜ್ಜೂರ ಸರ್ಕಾರಿ ಪ್ರೌಢಶಾಲೆಯ ಸಹಯೋಗದಲ್ಲಿ ಆಯೋಜಿಸಿದ್ದ ವಲಯ ಮಟ್ಟದ ಕ್ರೀಡಾಕೂಟಕ್ಕೆ ವಾಲಿಬಾಲ್ ಆಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು. ಗ್ರಾಮೀಣ ಕ್ರೀಡೆಗಳನ್ನು ಹೆಚ್ಚು ಉತ್ತೇಜಿಸುವ ಮೂಲಕ ಅವುಗಳ ಸೊಗಡನ್ನು ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ಯಬೇಕು. ಕ್ರೀಡೆಯಿಂದ ದೈಹಿಕ ಆರೋಗ್ಯದ ಜತೆಗೆ ಮಾನಸಿಕ ಸಾಮರ್ಥ್ಯವೂ ವೃದ್ಧಿಯಾಗುತ್ತದೆ. ಹೆಚ್ಚಿನ ವಿದ್ಯಾರ್ಥಿಗಳು ಕ್ರೀಡಾ ಹಾಸ್ಟೆಲ್‌ಗಳಿಗೆ ಆಯ್ಕೆಯಾಗಿ ಸರ್ಕಾರದ ಸೌಲಭ್ಯ ಪಡೆದು ಉತ್ತಮ ಕ್ರೀಡಾಪಟುಗಳಾಗಿ ಹೊರಹೊಮ್ಮಬೇಕು ಎಂದರು.

ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿ ಶಿವರಾಜ ಸಿಮೀಕೇರಿ ಮಾತನಾಡಿ, ವಿದ್ಯಾರ್ಥಿಗಳು ಪಾಠದ ಜತೆಗೆ ಕ್ರೀಡೆಗೂ ಆದ್ಯತೆ ನೀಡಬೇಕು. ಕ್ರೀಡೆಯು ವಿದ್ಯಾರ್ಥಿಗಳಲ್ಲಿ ಶಿಸ್ತು, ಆತ್ಮವಿಶ್ವಾಸ ಹಾಗೂ ತಂಡ ಮನೋಭಾವ ಬೆಳೆಸುತ್ತದೆ ಎಂದರು.

ಮಜ್ಜೂರ ಸರ್ಕಾರಿ ಪ್ರೌಢಶಾಲೆ, ರಣತೂರು, ಛಬ್ಬಿ ಹಾಗೂ ಮಾಚೆಹಳ್ಳಿ ಪ್ರೌಢಶಾಲೆಗಳ ವಿದ್ಯಾರ್ಥಿಗಳು ಕ್ರೀಡಾಕೂಟದಲ್ಲಿ ಪಾಲ್ಗೊಂಡಿದ್ದರು. ವಾಲಿಬಾಲ್, ಥ್ರೋಬಾಲ್, ಕಬಡ್ಡಿ, ಖೋ–ಖೋ ಸೇರಿದಂತೆ ವಿವಿಧ ವೈಯಕ್ತಿಕ ಹಾಗೂ ಸಾಮೂಹಿಕ ಕ್ರೀಡಾ ಸ್ಪರ್ಧೆಗಳು ನಡೆದವು.

ಮಜ್ಜೂರ ಗ್ರಾಮದ ಮುಖಂಡ ಶ್ರೀದೇವಪ್ಪ ಮಾದರ ಥ್ರೋಬಾಲ್, ಗುತ್ತಿಗೆದಾರ ಮಂಜು ಕಿರಣ ಪಾಟೀಲ ಕಬಡ್ಡಿ, ಗ್ರಾಮದ ಮುಖಂಡ ದಾದಾಫೀರ್ ನಾಯಕನವರ ಖೋ–ಖೋ ಪಂದ್ಯಗಳಿಗೆ ಚಾಲನೆ ನೀಡಿದರು. ಆಫ್ರಿದ್ ಬೈರಕ್‌ದಾರ ವೈಯಕ್ತಿಕ ಆಟಗಳಿಗೆ ಚಾಲನೆ ನೀಡಿದರು. ಎಸ್‌ಡಿಎಂಸಿ ಅಧ್ಯಕ್ಷ ರವಿ ಲಮಾಣಿ ಕ್ರೀಡಾ ಧ್ವಜಾರೋಹಣ ನೆರವೇರಿಸಿದರು. ಹಳೆ ವಿದ್ಯಾರ್ಥಿ ಸೇವಾಲಾಲ ಸಂಘ, ಶಿವಾಜಿನಗರ ತಾಂಡಾದ ಮಹೇಶ ಲಮಾಣಿ ವಿಜೇತರಿಗೆ ಪ್ರಶಸ್ತಿ ವಿತರಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ವಸಂತ ಲಮಾಣಿ, ಬಸಪ್ಪ ಮುಂಡವಾಡ, ಎಸ್‌ಆರ್‌ಡಿಕೆ ಸಂಸ್ಥೆಯ ಮಾಲೀಕ ಮಂಜುನಾಥ ಲಮಾಣಿ, ಛಬ್ಬಿ ಕ್ಲಸ್ಟರ್‌ನ ಸಿಆರ್‌ಪಿ ಗೀತಾ ಸರ್ವಿ, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು. ಸಂತೋಷ ದಾಮೋದರ ನಿರೂಪಿಸಿದರು. ಕಿರಣಕುಮಾರ ಎಂ. ಲಮಾಣಿ ಸ್ವಾಗತಿಸಿದರು. ರೇಷ್ಮಾ ಎಚ್. ಪ್ರಾರ್ಥಿಸಿದರು. ಎಫ್.ಎ. ಮಕರಬಿ ವಂದನಾರ್ಪಣೆ ಸಲ್ಲಿಸಿದರು.

> ಗ್ರಾಮೀಣ ವಿದ್ಯಾರ್ಥಿಗಳಲ್ಲೇ ಕ್ರೀಡಾ ಪ್ರತಿಭೆ ಹೆಚ್ಚಿದ್ದು, ಅವರಿಗೆ ಹೆಚ್ಚಿನ ಅವಕಾಶ ಕಲ್ಪಿಸಬೇಕು. ಗ್ರಾಮೀಣ ಕ್ರೀಡೆಗಳನ್ನು ಉತ್ತೇಜಿಸಿ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ಯಬೇಕು. ಕ್ರೀಡೆಯಿಂದ ದೈಹಿಕ ಆರೋಗ್ಯದ ಜತೆಗೆ ಮಾನಸಿಕ ಸಾಮರ್ಥ್ಯವೂ ವೃದ್ಧಿಸುತ್ತದೆ.
> **– ರವಿಕಾಂತ ಅಂಗಡಿ, ವಕೀಲರು ಹಾಗೂ ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷರು**

## ನಿಧನ
### ಪದವ್ವ ಬಿದರಳ್ಳಿ



ಗದಗ: ತಾಲೂಕಿನ ಹರ್ಲಾಪೂರ ಗ್ರಾಮದ ಶ್ರೀಮತಿ ಪದವ್ವ ಬಸವರಡ್ಡಿ ಬಿದರಳ್ಳಿ (80) ಅವರು ಶುಕ್ರವಾರ ಮುಂಜಾನೆ ನಿಧನರಾದರು. ಮೃತರ ಅಂತ್ಯಕ್ರಿಯೆ ಶುಕ್ರವಾರ ಮಧ್ಯಾಹ್ನ 1.30ಕ್ಕೆ ನೆರವೇರಿತು.

ಮೃತರು ಇಬ್ಬರು ಪುತ್ರರು, ನಾಲ್ವರು ಪುತ್ರಿಯರು ಸೇರಿದಂತೆ ಅಪಾರ ಬಂಧುಬಳಗವನ್ನು ಅಗಲಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka